ಸತ್ಯ ಮತ್ತು ಧೈರ್ಯದ ಧ್ವನಿ

ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 141 | ರಾಯಚೂರು Raichur | 12-11-2026 | ಗುರುವಾರ Thursday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685

ದೀಪಾವಳಿ ಹಬ್ಬದ ಶುಭಾಶಯಗಳು!

ಇಬ್ಬರು ಅಪರಾಧಿಗಳಿಗೆ 6 ತಿಂಗಳ ಜೈಲು ಶಿಕ್ಷೆ, ತಲಾ ₹3 ಸಾವಿರ ದಂಡ

ರಾಯಚೂರು, ನ.11: ಲಿಂಗಸುಗೂರು ಪೊಲೀಸ್ ಠಾಣೆ ವ್ಯಾಪ್ತಿಯ ಸುಣಕಲ್ ಗ್ರಾಮದಲ್ಲಿ ನಡೆದ ಜಾತಿ ನಿಂದನೆ, ಹಲ್ಲೆ ಹಾಗೂ ಜೀವ ಬೆದರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಆರೋಪಿಗಳ ಅಪರಾಧ ಸಾಬೀತಾದ ಹಿನ್ನೆಲೆಯಲ್ಲಿ ನ್ಯಾಯಾಲಯವು ಆರು ತಿಂಗಳ ಕಾರಾಗೃಹ ಶಿಕ್ಷೆ ಹಾಗೂ ತಲಾ ₹3 ಸಾವಿರ ದಂಡ ವಿಧಿಸಿ ತೀರ್ಪು ನೀಡಿದೆ.

ಪ್ರಕರಣದ ವಿವರ: ಲಿಂಗಸುಗೂರು ತಾಲೂಕಿನ ಸುಣಕಲ್ ಗ್ರಾಮದ ನಿವಾಸಿ ಯಲ್ಲಮ್ಮ ಅಲಿಯಾಸ್ ಯಲ್ಲವ್ವ ಅವರ ಮಕ್ಕಳು ಮೊಬೈಲ್‌ನಲ್ಲಿ ಹಾಡು ಹಾಕಿಕೊಂಡಿದ್ದ ವಿಚಾರವಾಗಿ ಮಾಳಿಂಗರಾಯ ಎಂಬಾತನೊಂದಿಗೆ ಮಾತಿನ ಚಕಮಕಿ ನಡೆದಿತ್ತು. ಮೊಬೈಲ್‌ನಲ್ಲಿ ಹಾಡು ಹಾಕದಂತೆ ಆಕ್ಷೇಪ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಉಂಟಾದ ವಾಗ್ವಾದವು ಜಗಳಕ್ಕೆ ಕಾರಣವಾಗಿತ್ತು ಎನ್ನಲಾಗಿದೆ.

ಈ ಘಟನೆಯಿಂದ ಉಂಟಾದ ವಿವಾದದ ಹಿನ್ನೆಲೆಯಲ್ಲಿ ಆರೋಪಿಗಳು ಒಟ್ಟಾಗಿ ಯಲ್ಲಮ್ಮ ಅವರ ಮನೆಗೆ ತೆರಳಿ ಜಗಳ ತೆಗೆದು, ಹಲ್ಲೆ ನಡೆಸಿ, ಜಾತಿ ನಿಂದನೆ ಮಾಡುವುದರ ಜೊತೆಗೆ ಜೀವ ಬೆದರಿಕೆ ಹಾಕಿದ್ದಾರೆ ಎಂದು ಯಲ್ಲಮ್ಮ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ದೂರಿನ ಆಧಾರದಲ್ಲಿ ಲಿಂಗಸುಗೂರು ಪೊಲೀಸ್ ಠಾಣೆಯಲ್ಲಿ 2021ರಲ್ಲಿ ಅಪರಾಧ ಸಂಖ್ಯೆ 08/2021ರ



ಅಡಿಯಲ್ಲಿ ಭಾರತೀಯ ದಂಡ ಸಂಹಿತೆಯ ಕಲಂ 143, 147, 148, 323, 324, 504, 506 ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ತಡೆ ಕಾಯ್ದೆಯ ತಿದ್ದುಪಡಿ-2015ರ ಕಲಂ 3(1)(r), 3(1)(s) ಮತ್ತು 3(2)(va) ಅನ್ವಯ ಪ್ರಕರಣ ದಾಖಲಿಸಲಾಗಿತ್ತು.

ಪ್ರಕರಣದ ತನಿಖೆಯನ್ನು ಅಂದಿನ ಲಿಂಗಸುಗೂರು ಪೊಲೀಸ್ ಉಪಾಧೀಕ್ಷಕ ಎಸ್.ಎಸ್. ಹುಲ್ಲೂರು ಅವರು ಕೈಗೊಂಡು, ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ರಾಯಚೂರಿನ ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಸಿಂಧನೂರು ಪೀಠದ ನ್ಯಾಯಾಧೀಶ ಎ. ಸೋಮಶೇಖರ್ ಅವರು ಸಾಕ್ಷ್ಯಾಧಾರಗಳು ಹಾಗೂ ವಾದ-ಪ್ರತಿವಾದಗಳನ್ನು ಪರಿಶೀಲಿಸಿದರು.

ನವೆಂಬರ್ 7ರಂದು ನೀಡಿದ ತೀರ್ಪಿನಲ್ಲಿ ಆರೋಪಿಗಳಾದ ಯಲ್ಲಪ್ಪ ಮತ್ತು ಬಸಪ್ಪ ಅವರು ಅಪರಾಧ ಎಸಗಿರುವುದು ಸಾಬೀತಾಗಿದೆ ಎಂದು ಪರಿಗಣಿಸಿದ ನ್ಯಾಯಾಲಯ, ಇಬ್ಬರಿಗೂ ಆರು ತಿಂಗಳ ಕಾರಾಗೃಹ ಶಿಕ್ಷೆ ಹಾಗೂ ತಲಾ ₹3 ಸಾವಿರ ದಂಡ ವಿಧಿಸಿದೆ.

ಪ್ರಕರಣದಲ್ಲಿ ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ಮಂಜುನಾಥ ಬೇರ್ಗಿ ವಾದ ಮಂಡಿಸಿದರು.

ಲಿಂಗಸುಗೂರು ಪೊಲೀಸ್ ಠಾಣೆಯ ಸಿಬ್ಬಂದಿಗಳಾದ ನಿಂಗಯ್ಯ (ಪಿಸಿ ಸಂಖ್ಯೆ 110) ಹಾಗೂ ಮಂಜುನಾಥ (ಸಿಪಿಸಿ ಸಂಖ್ಯೆ 118) ಅವರು ಸಾಕ್ಷಿದಾರರನ್ನು ನಿಗದಿತ ಸಮಯದಲ್ಲಿ ನ್ಯಾಯಾಲಯಕ್ಕೆ ಹಾಜರುಪಡಿಸುವ ಕಾರ್ಯದಲ್ಲಿ ಸಹಕರಿಸಿದ್ದರು.

ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಹುಂಡಿಯಲ್ಲಿ ₹2.76 ಕೋಟಿ ಕಾಣಿಕೆ ಸಂಗ್ರಹ



ಮಂತ್ರಾಲಯ, ನ.11: ಪ್ರಸಿದ್ಧ ಪುಣ್ಯಕ್ಷೇತ್ರ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಹುಂಡಿಯಲ್ಲಿ ಕೇವಲ 19 ದಿನಗಳ ಅವಧಿಯಲ್ಲಿ ₹2.76 ಕೋಟಿಗೂ ಅಧಿಕ ಕಾಣಿಕೆ ಸಂಗ್ರಹವಾಗಿದೆ. ನವೆಂಬರ್ 11ರಂದು ನಡೆದ ಹುಂಡಿ ಎಣಿಕೆ ಕಾರ್ಯ ಪೂರ್ಣಗೊಂಡಿದ್ದು, ಒಟ್ಟು ₹2,76,62,955 ನಗದು ಕಾಣಿಕೆ ಸಂಗ್ರಹವಾಗಿದೆ ಎಂದು ಮಠದ ಆಡಳಿತ ವ್ಯವಸ್ಥಾಪಕ ಎಸ್.ಕೆ. ಶ್ರೀನಿವಾಸ ರಾವ್ ತಿಳಿಸಿದ್ದಾರೆ.

ಅಕ್ಟೋಬರ್ 23ರಿಂದ ನವೆಂಬರ್ 10ರವರೆಗಿನ 19 ದಿನಗಳ ಅವಧಿಯಲ್ಲಿ ಭಕ್ತರು ಹುಂಡಿಗೆ ಸಲ್ಲಿಸಿದ ಕಾಣಿಕೆಯನ್ನು ಬುಧವಾರ ಎಣಿಕೆ ಮಾಡಲಾಯಿತು. ಈ ವೇಳೆ ₹2,68,66,655 ಮೌಲ್ಯದ ಕರೆನ್ಸಿ ನೋಟುಗಳು ಹಾಗೂ ₹7,96,300 ಮೌಲ್ಯದ ನಾಣ್ಯಗಳು ಸಂಗ್ರಹವಾಗಿರುವುದು ಕಂಡುಬಂದಿದೆ.

ನಗದು ಕಾಣಿಕೆಯೊಂದಿಗೆ ಭಕ್ತರು 49 ಗ್ರಾಂ ಚಿನ್ನ ಹಾಗೂ 680 ಗ್ರಾಂ ಬೆಳ್ಳಿಯನ್ನೂ ಹುಂಡಿಗೆ ಸಮರ್ಪಿಸಿದ್ದಾರೆ. ಚಿನ್ನ ಮತ್ತು ಬೆಳ್ಳಿಯ ಮೌಲ್ಯವನ್ನು ನಗದು ಕಾಣಿಕೆಯ ಒಟ್ಟು ಮೊತ್ತದಲ್ಲಿ ಸೇರಿಸಲಾಗಿಲ್ಲ.

ಶ್ರೀ ರಾಘವೇಂದ್ರ ಸ್ವಾಮಿಗಳ ಮೇಲಿನ ಭಕ್ತಿಯ ಸಂಕೇತವಾಗಿ ಭಕ್ತರು ಸಲ್ಲಿಸಿರುವ ಕಾಣಿಕೆಗಳ ಎಣಿಕೆ ಕಾರ್ಯ ಪೂರ್ಣಗೊಂಡಿದ್ದು, ಸಂಗ್ರಹವಾದ ನಗದು, ಚಿನ್ನ ಹಾಗೂ ಬೆಳ್ಳಿಯ ವಿವರಗಳನ್ನು ಮಠದ ಆಡಳಿತ ವ್ಯವಸ್ಥಾಪಕ ಎಸ್.ಕೆ. ಶ್ರೀನಿವಾಸ ರಾವ್ ಪ್ರಕಟಿಸಿದ್ದಾರೆ.

ಗ್ರಾಮೀಣ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಆದ್ಯತೆ: ಬಸನಗೌಡ ದದ್ದಲ್

ರಸ್ತೆ, ಶಾಲಾ ಕೊಠಡಿ, ಸಮುದಾಯ ಭವನ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಚಾಲನೆ

ರಾಯಚೂರು: ಗ್ರಾಮೀಣ ಪ್ರದೇಶಗಳ ಜನರಿಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವುದರ ಜೊತೆಗೆ ಶಿಕ್ಷಣ, ರಸ್ತೆ ಸಂಪರ್ಕ, ಕುಡಿಯುವ ನೀರು ಹಾಗೂ ಧಾರ್ಮಿಕ ಕ್ಷೇತ್ರಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಹೇಳಿದರು.

ಕ್ಷೇತ್ರದ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ, ಪೂರ್ಣಗೊಂಡ ಕಾಮಗಾರಿಗಳನ್ನು ಉದ್ಘಾಟಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಪ್ರತಿಯೊಂದು ಗ್ರಾಮವೂ ಅಭಿವೃದ್ಧಿಯ ಮುಖ್ಯವಾಹಿನಿಗೆ ಬರಬೇಕು. ಗ್ರಾಮೀಣ ಜನರ ದೈನಂದಿನ ಜೀವನಕ್ಕೆ ಅನುಕೂಲವಾಗುವ ಸೌಲಭ್ಯಗಳನ್ನು ಕಲ್ಪಿಸುವುದು ಪ್ರಮುಖ ಉದ್ದೇಶವಾಗಿದೆ. ರಸ್ತೆಗಳಿಂದ ಶಿಕ್ಷಣದವರೆಗೆ, ಮೂಲಸೌಕರ್ಯಗಳಿಂದ



ಧಾರ್ಮಿಕ ಕೇಂದ್ರಗಳವರೆಗೆ ಎಲ್ಲ ಕ್ಷೇತ್ರಗಳಲ್ಲಿಯೂ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.


ಗಣಮೂರು ಗ್ರಾಮದಿಂದ ಕಟಕನೂರು ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ನಿರ್ಮಾಣಕ್ಕೆ ₹1.50 ಕೋಟಿ ವೆಚ್ಚದಲ್ಲಿ ಭೂಮಿಪೂಜೆ ನೆರವೇರಿಸಿದರು. ಈ ರಸ್ತೆ ಕಾಮಗಾರಿಯಿಂದ ಗ್ರಾಮಗಳ ನಡುವಿನ ಸಂಪರ್ಕ ವ್ಯವಸ್ಥೆ ಸುಧಾರಣೆಯಾಗುವ ನಿರೀಕ್ಷೆಯಿದೆ.

ನಾಗನದೊಡ್ಡಿ ಗ್ರಾಮದಲ್ಲಿ ಮಾರೇಮ್ಮ ದೇವಿ ದೇವಸ್ಥಾನದ ಕಾಮಗಾರಿಗೆ ಚಾಲನೆ ನೀಡಿದ ಶಾಸಕರು, ₹37.50 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾದ ಎರಡು ಶಾಲಾ ಕೊಠಡಿಗಳನ್ನು ಉದ್ಘಾಟಿಸಿದರು. ಕೊತ್ತದೊಡ್ಡಿ ಗ್ರಾಮದಲ್ಲಿಯೂ ಮಾರೇಮ್ಮ ದೇವಿ ದೇವಸ್ಥಾನ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದರು. 2ನೇ ಪುಟಕ್ಕೆ

10 ವರ್ಷದ ಬಾಲಕನ ಬಾಯಿಗೆ ಬಟ್ಟೆ ತುರುಕಿ ಅಮಾನುಷ ಹಲ್ಲೆ: ಆರು ಶಿಕ್ಷಕರ ವಿರುದ್ಧ ಪ್ರಕರಣ ದಾಖಲು

ರಾಯಚೂರು: ಸರಿಯಾಗಿ ಓದಲು ಬರುತ್ತಿಲ್ಲ ಎಂಬ ಕಾರಣಕ್ಕೆ 10 ವರ್ಷದ ಬಾಲಕನ ಬಾಯಿಗೆ ಬಟ್ಟೆ ತುರುಕಿ, ಕಟ್ಟಿಗೆಯಿಂದ ಕಣ್ಣು, ತಲೆ, ಬೆನ್ನು ಹಾಗೂ ಕೈಕಾಲುಗಳಿಗೆ ಮನಬಂದಂತೆ ಹೊಡೆದು ಗಂಭೀರವಾಗಿ ಗಾಯಗೊಳಿಸಿರುವ ಆರೋಪ ಜಿಲ್ಲೆಯ ಸಿರವಾರ ತಾಲೂಕಿನ ಕವಿತಾಳ ಪಟ್ಟಣದ ಮದರಸಾ ದಾರುಲ್ ಹುಫ್ಫಾಜ್ ಶಾಲೆಯಲ್ಲಿ ಕೇಳಿಬಂದಿದೆ. ಘಟನೆಗೆ ಸಂಬಂಧಿಸಿದಂತೆ ಶಾಲೆಯ ಮುಖ್ಯಶಿಕ್ಷಕ ಸೇರಿದಂತೆ ಆರು ಮಂದಿ ವಿರುದ್ಧ ಕವಿತಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ನವೆಂಬರ್ 3ರಂದು ಮಧ್ಯಾಹ್ನ 1 ಗಂಟೆ ಸುಮಾರಿಗೆ ಈ ಘಟನೆ ನಡೆದಿದ್ದು, ಹಲ್ಲೆಗೊಳಗಾದ ಬಾಲಕನನ್ನು 10 ವರ್ಷದ ಅಹ್ಮದ್ ಹುಸೇನ್ ಎಂದು ಗುರುತಿಸಲಾಗಿದೆ.



ಬಾಲಕನ ತಂದೆ ಅಬ್ದುಲ್ ನಹೀಮ್ ಅವರು ನವೆಂಬರ್ 9ರಂದು ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ದೂರುದಾರ ಅಬ್ದುಲ್ ನಹೀಮ್ ಅವರು ತಮ್ಮ ಮೂರನೇ ಮಗ ಅಹ್ಮದ್ ಹುಸೇನ್‌ನನ್ನು ಎರಡು ವರ್ಷಗಳ ಹಿಂದೆ ಕವಿತಾಳ ಪಟ್ಟಣದ ಮದರಸಾ ದಾರುಲ್ ಹುಫ್ಫಾಜ್ ಶಾಲೆಗೆ ವಿದ್ಯಾಭ್ಯಾಸಕ್ಕಾಗಿ ದಾಖಲಿಸಿದ್ದರು. ನವೆಂಬರ್ 8ರಂದು ಸಂಜೆ 5 ಗಂಟೆ ಸುಮಾರಿಗೆ ಸಂಬಂಧಿಕರೊಂದಿಗೆ ಮಗನನ್ನು ಭೇಟಿಯಾಗಲು ಶಾಲೆಗೆ ತೆರಳಿದಾಗ ಹಲ್ಲೆಯ ಘಟನೆ ಬೆಳಕಿಗೆ ಬಂದಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ನವೆಂಬರ್ 3ರಂದು ಮಧ್ಯಾಹ್ನ ಶಾಲೆಯ ಶಿಕ್ಷಕ ಅಬ್ಬಾಸ್, ಬಾಲಕನಿಗೆ ಸರಿಯಾಗಿ ಓದಲು ಬರುತ್ತಿಲ್ಲ ಎಂಬ ಕಾರಣಕ್ಕೆ ಆತನ ಬಾಯಿಗೆ ಬಟ್ಟೆ ತುರುಕಿ ಕಟ್ಟಿಗೆಯಿಂದ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ. 2ನೇ ಪುಟಕ್ಕೆ

ಉಚಿತ ಆರೋಗ್ಯ ತಪಾಸಣಾ ಶಿಬಿರ: ಸದುಪಯೋಗಕ್ಕೆ ಶಾಸಕ ಆರ್. ಬಸನಗೌಡ ಕರೆ

ಸಿಂಧನೂರು: ತಾಲೂಕಿನ ತುರುವಿಹಾಳ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವಿವಿಧ ಕಾಯಿಲೆಗಳ ತಪಾಸಣೆಗಾಗಿ 40ಕ್ಕೂ ಹೆಚ್ಚು ನುರಿತ ವೈದ್ಯರನ್ನೊಳಗೊಂಡ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದ್ದು, ತುರುವಿಹಾಳ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಶಾಸಕ ಆರ್. ಬಸನಗೌಡ ತುರುವಿಹಾಳ ಮನವಿ ಮಾಡಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ, ತುರುವಿಹಾಳ ಸಮುದಾಯ ಆರೋಗ್ಯ ಕೇಂದ್ರ ಹಾಗೂ ಸಿಂಧನೂರಿನ ಸುಗುಣ ಆಸ್ಪತ್ರೆಯ ಸಂಯುಕ್ತಾಶ್ರಯದಲ್ಲಿ ಈ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಗ್ರಾಮೀಣ ಭಾಗದ ಜನರಿಗೆ ಗುಣಮಟ್ಟದ



ವೈದ್ಯಕೀಯ ಸೇವೆಗಳನ್ನು ಸ್ಥಳೀಯವಾಗಿಯೇ ಒದಗಿಸುವ ಉದ್ದೇಶದಿಂದ ಶಿಬಿರ ಆಯೋಜಿಸಲಾಗಿದೆ. ವಿವಿಧ ಕಾಯಿಲೆಗಳಿಗೆ ಸಂಬಂಧಿಸಿದಂತೆ ತಜ್ಞ ವೈದ್ಯರು ಆಗಮಿಸಿ ಸಾರ್ವಜನಿಕರ ಆರೋಗ್ಯ ತಪಾಸಣೆ ನಡೆಸಲಿದ್ದಾರೆ. ವಿಶೇಷವಾಗಿ ಗ್ರಾಮೀಣ ಪ್ರದೇಶದ ಬಡವರು, ಮಹಿಳೆಯರು, ವೃದ್ಧರು ಹಾಗೂ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರು ಈ ಅವಕಾಶವನ್ನು ಬಳಸಿಕೊಳ್ಳಬೇಕು ಎಂದು ಹೇಳಿದರು.

ತುರುವಿಹಾಳ ಸಮುದಾಯ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಿದ ನಂತರ ವೈದ್ಯರಾದ ಡಾ. ನಾಗರಾಜ ಕಾಟ್ವಾ ಹಾಗೂ ಶ್ರೀರಾಮ ನಲ್ಲಾ ಅವರ ಸೇವೆಯಿಂದ ಪ್ರತಿದಿನ 300ಕ್ಕೂ ಹೆಚ್ಚು ರೋಗಿಗಳಿಗೆ ಆರೋಗ್ಯ ತಪಾಸಣೆ ನಡೆಸಲಾಗುತ್ತಿದೆ. ಇದರಿಂದ ತುರುವಿಹಾಳ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜನರಿಗೆ ಅನುಕೂಲವಾಗಿದೆ ಎಂದು ತಿಳಿಸಿದರು.

ತುರುವಿಹಾಳ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ನಾಗರಾಜ ಕಾಟ್ವಾ ಮಾತನಾಡಿ, 2ನೇ ಪುಟಕ್ಕೆ

ಓಬವ್ವ ನಮ್ಮೆಲ್ಲರಿಗೂ ಸದಾ ಸ್ಫೂರ್ತಿದಾಯಕ: ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರು

ರಾಯಚೂರು, ನ. 11 (ಕರ್ನಾಟಕ ವಾರ್ತೆ): ಇತಿಹಾಸದ ಪುಟಗಳಲ್ಲಿ ಸಾಹಸ, ತ್ಯಾಗ ಮತ್ತು ಬಲಿದಾನದ ಸಂಕೇತವಾಗಿರುವ ವೀರರಾಣಿ ಒನಕೆ ಓಬವ್ವ ನಮ್ಮೆಲ್ಲರಿಗೂ ಸದಾ ಸ್ಫೂರ್ತಿದಾಯಕವಾಗಿದ್ದಾರೆ ಎಂದು ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೋಪಾಲ ಗೆಣ್ಣೂರು ಹೇಳಿದರು.

ನವೆಂಬರ್ 11ರಂದು ಬುಧವಾರ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವೀರರಾಣಿ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಚಿತ್ರದುರ್ಗದ ಮದಕರಿ ನಾಯಕನ ಆಸ್ಥಾನದ ಇತಿಹಾಸವು ನಮ್ಮೆಲ್ಲರಿಗೂ ಸದಾ ಸ್ಫೂರ್ತಿದಾಯಕವಾಗಿದೆ. ಹೈದರಾಲಿಯ



ಸೇನೆಯು ಚಿತ್ರದುರ್ಗದ ಕೋಟೆಯನ್ನು ಭೇದಿಸಲು ಎರಡು-ಮೂರು ಬಾರಿ ಪ್ರಯತ್ನಿಸಿದರೂ ಯಶಸ್ವಿಯಾಗಿರಲಿಲ್ಲ. ಕೊನೆಗೆ ಕಳ್ಳಮಾರ್ಗದಿಂದ ಕೋಟೆಯೊಳಗೆ ನುಗ್ಗಿ ವಿಜಯ ಸಾಧಿಸಲು ಹೈದರಾಲಿ ಮಾಡಿದ ಕುತಂತ್ರವನ್ನು ಓಬವ್ವ ಧೈರ್ಯದಿಂದ ಮೆಟ್ಟಿನಿಂತರು. ಕೋಟೆಯ ಕಾವಲುಗಾರ ಮುದ್ದಹನುಮಪ್ಪ ಊಟ ಮಾಡುತ್ತಿದ್ದ ಸಂದರ್ಭದಲ್ಲಿ ಕೋಟೆಯೊಳಗೆ ನುಗ್ಗುತ್ತಿದ್ದ ಶತ್ರು ಸೈನಿಕರನ್ನು ಒಬ್ಬೊಬ್ಬರಾಗಿ ಒನಕೆಯಿಂದ ಹೊಡೆದುರುಳಿಸಿ, ಕೋಟೆಯನ್ನು ಮತ್ತು ಸಾಮ್ರಾಜ್ಯವನ್ನು ರಕ್ಷಿಸಿದ ಆಕೆಯ ಸಾಹಸಗಾಥೆ ರೋಮಾಂಚನಕಾರಿಯಾಗಿದೆ ಎಂದರು.

ಒಬ್ಬ ಮಹಿಳೆ ತನ್ನ ಪ್ರಾಣವನ್ನೇ ಪಣಕ್ಕಿಟ್ಟು ನಾಡನ್ನು ರಕ್ಷಿಸಿದ ಆ ಶೌರ್ಯವು ಇಂದಿನ ಹೆಣ್ಣುಮಕ್ಕಳಿಗೆ ಧೈರ್ಯ ಮತ್ತು ಆತ್ಮವಿಶ್ವಾಸದ ಪ್ರತೀಕವಾಗಿದೆ. ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ನೇತೃತ್ವದಲ್ಲಿ ರಚನೆಯಾದ ಸಂವಿಧಾನವು ಎಲ್ಲರಿಗೂ ಸಮಾನತೆ ಮತ್ತು ಸಮಾನ ಅವಕಾಶಗಳನ್ನು ಕಲ್ಪಿಸಿಕೊಟ್ಟಿದೆ. ಇಂತಹ ವೀರಮಾತೆಯರ ಆದರ್ಶಗಳನ್ನು ಮೈಗೂಡಿಸಿಕೊಂಡು 2ನೇ ಪುಟಕ್ಕೆ

ಎಸ್ಪಿ ವಿರುದ್ಧ ಅವಾಚ್ಯ ಶಬ್ದಗಳಿಂದ ನಿಂದಿಸಿದ ಆರೋಪ: ವರ್ಗಾವಣೆಗೆ ಚಿನ್ನಯ್ಯ ನಾಯಕ ಆಗ್ರಹ

ರಾಯಚೂರು: ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ತಮ್ಮ ಕಚೇರಿಯಲ್ಲಿ ಅವಾಚ್ಯ ಶಬ್ದಗಳಿಂದ ನಿಂದಿಸಿ, ಅವಮಾನಕರ ರೀತಿಯಲ್ಲಿ ವರ್ತಿಸಿದ್ದಲ್ಲದೆ, ರೌಡಿಶೀಟರ್ ಹಾಗೂ ವಂಚನೆ ಪ್ರಕರಣ ದಾಖಲಿಸುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ರಾಯಚೂರು ಜಿಲ್ಲಾ ಹತ್ತಿ ಬೆಳೆಗಾರರ ರೈತರ ಹೋರಾಟ ಸಮಿತಿ ಅಧ್ಯಕ್ಷ ಪಿ.ಎಸ್. ಚಿನ್ನಯ್ಯ ನಾಯಕ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನವೆಂಬರ್ 6ರಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಗೆ ತೆರಳಿ ಎಸ್ಪಿ ಅವರಿಗೆ ಕಿರುಸನ್ಮಾನ ಮಾಡಲು ಮುಂದಾದ ಸಂದರ್ಭದಲ್ಲಿ ಈ ಘಟನೆ ನಡೆದಿದೆ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ಸನ್ಮಾನಿಸುವ ಉದ್ದೇಶದಿಂದ ಕಚೇರಿಗೆ ಭೇಟಿ ನೀಡಿದ್ದಾಗ ಯಾವುದೇ ಮುನ್ಸೂಚನೆ



ಇಲ್ಲದೆ ಏಕವಚನದಲ್ಲಿ ಮಾತನಾಡಿ, 'ನೀವು ಜೋಳಿಗೆ ಸಂಘದವರು, ವಸೂಲಿಗಾರರು' ಎಂದು ಅವಮಾನಿಸಿದರು. ಅಲ್ಲದೆ, ತಮ್ಮ ವಿರುದ್ಧ ರೌಡಿಶೀಟರ್ ತೆರೆಯುವುದಾಗಿ ಹಾಗೂ ಭಾರತೀಯ ದಂಡ ಸಂಹಿತೆಯ 420ನೇ ಕಲಂ ಅಡಿಯಲ್ಲಿ ವಂಚನೆ ಪ್ರಕರಣ ದಾಖಲಿಸುವುದಾಗಿ ಬೆದರಿಕೆ ಹಾಕಿದರು ಎಂದು ದೂರಿದರು.


ಕಚೇರಿಯಲ್ಲಿದ್ದ ಸುಮಾರು ಒಂಬತ್ತು ಪೊಲೀಸ್ ಸಿಬ್ಬಂದಿಯ ಸಮ್ಮುಖದಲ್ಲಿಯೇ ತಮ್ಮೊಂದಿಗೆ ವಾಗ್ವಾದ ನಡೆಸಿ ಅವಮಾನಕರವಾಗಿ ವರ್ತಿಸಿದರು. ಬಳಿಕ ಸನ್ಮಾನ ಸ್ವೀಕರಿಸಿದರೂ ಅವರ ವರ್ತನೆಯಿಂದ ತೀವ್ರ ಮಾನಸಿಕ ನೋವು ಹಾಗೂ ಅವಮಾನ ಅನುಭವಿಸುವಂತಾಯಿತು ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಳೆದ ಸುಮಾರು 30 ವರ್ಷಗಳಿಂದ ರಾಯಚೂರು ಜಿಲ್ಲೆಯಲ್ಲಿ ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಾ, ಹತ್ತಿ ಬೆಳೆಗಾರರು ಸೇರಿದಂತೆ ಕೃಷಿಕರ ಹಕ್ಕುಗಳಿಗಾಗಿ ನಿರಂತರ ಹೋರಾಟ ನಡೆಸಿಕೊಂಡು ಬಂದಿದ್ದೇನೆ. ರೈತಪರ ಸಂಘಟನೆಗಳ ಮೂಲಕ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದು, 2ನೇ ಪುಟಕ್ಕೆ

ಇಡಪನೂರುಮೀರಾಪುರ ರಸ್ತೆ ಸೇತುವೆ ಕಾಮಗಾರಿಯಲ್ಲಿ ಕಳಪೆ ಆರೋಪ: ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ಆಗ್ರಹ

ರಾಯಚೂರು: ತಾಲೂಕಿನ ಇಡಪನೂರು ಗ್ರಾಮದಿಂದ ಮೀರಾಪುರ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ₹70 ಲಕ್ಷ ವೆಚ್ಚದಲ್ಲಿ ಕೈಗೊಳ್ಳಲಾಗಿರುವ ಸೇತುವೆ ನಿರ್ಮಾಣ ಕಾಮಗಾರಿಯಲ್ಲಿ ವ್ಯಾಪಕ ಅಕ್ರಮ ಹಾಗೂ ಕಳಪೆ ಕಾಮಗಾರಿ ನಡೆದಿದೆ ಎಂದು ಆರೋಪಿಸಿರುವ ಇಡಪನೂರು ಗ್ರಾಮದ ನಿವಾಸಿ ಯೋಹಾನ್, ಸಂಬಂಧಪಟ್ಟ ಅಧಿಕಾರಿಗಳು ಮತ್ತು ಗುತ್ತಿಗೆದಾರರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ, ಕಾಮಗಾರಿಯ ಬಿಲ್ ಪಾವತಿಯನ್ನು ತಡೆಹಿಡಿಯುವಂತೆ ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 202526ನೇ ಸಾಲಿನ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆಯಡಿ ಇಡಪನೂರುಮೀರಾಪುರ ರಸ್ತೆ ಹಾಗೂ ಸೇತುವೆ ನಿರ್ಮಾಣ ಕಾಮಗಾರಿಗೆ ₹70 ಲಕ್ಷ ಅನುದಾನ ಬಿಡುಗಡೆಯಾಗಿದೆ. ಲೆಕ್ಕಶೀರ್ಷಿಕೆ 5054ರ ಅಡಿಯಲ್ಲಿ



ಕೈಗೆತ್ತಿಕೊಂಡಿರುವ ಈ ಕಾಮಗಾರಿಯನ್ನು ಕೆಆರ್‌ಡಿಐಎಲ್ ಸಂಸ್ಥೆಯ ಕಾರ್ಯನಿರ್ವಾಹಕ ಎಂಜಿನಿಯರ್ ಮೊಹಮ್ಮದ್ ಸೋಯಿಲ್, ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್, ಕಿರಿಯ ಎಂಜಿನಿಯರ್ ಸತೀಶರೆಡ್ಡಿ ಹಾಗೂ ಗುತ್ತಿಗೆದಾರ ರಾಜೇಶರೆಡ್ಡಿ ಅವರ ಮೇಲ್ವಿಚಾರಣೆಯಲ್ಲಿ ನಿರ್ವಹಿಸಲಾಗಿದೆ ಎಂದು ತಿಳಿಸಿದರು.

ಆದರೆ, ಕಾಮಗಾರಿಯನ್ನು ನಿಗದಿಪಡಿಸಿದ ಸ್ಥಳದಲ್ಲಿ ಕೈಗೊಳ್ಳದೆ ಬೇರೆ ಸ್ಥಳದಲ್ಲಿ ಸೇತುವೆ ನಿರ್ಮಿಸಲಾಗಿದೆ. ಅಲ್ಲದೆ, ಮಂಜೂರಾದ ಅಂದಾಜುಪಟ್ಟಿ ಹಾಗೂ ತಾಂತ್ರಿಕ ನಿಯಮಗಳನ್ನು ಪಾಲಿಸದೆ ಮನಬಂದಂತೆ ಕಾಮಗಾರಿ ನಡೆಸಲಾಗಿದೆ. ನಿರ್ಮಾಣದ ಗುಣಮಟ್ಟವೂ ತೀರಾ ಕಳಪೆಯಾಗಿದ್ದು, ಸಾರ್ವಜನಿಕರ ಹಣ ದುರುಪಯೋಗವಾಗಿರುವ ಶಂಕೆ ವ್ಯಕ್ತವಾಗಿದೆ ಎಂದು ಆರೋಪಿಸಿದರು.

ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಗೆ ಈಗಾಗಲೇ ಎರಡು ಬಾರಿ 2ನೇ ಪುಟಕ್ಕೆ

ನವೆಂಬರ್ ಅಂತ್ಯದೊಳಗೆ ಪಡಿತರ ಚೀಟಿದಾರರು ಇ-ಕೆವೈಸಿ ಕಡ್ಡಾಯವಾಗಿ ಪೂರ್ಣಗೊಳಿಸಿ: ಆಹಾರ ಇಲಾಖೆ ಸೂಚನೆ

ರಾಯಚೂರು, ನ. 11 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ ಪಡಿತರ ಚೀಟಿಗಳಲ್ಲಿರುವ ಎಲ್ಲ ಸದಸ್ಯರು ಪ್ರತಿ ಐದು ವರ್ಷಗಳಿಗೊಮ್ಮೆ ಇ-ಕೆವೈಸಿ ಪ್ರಕ್ರಿಯೆಯನ್ನು ಕಡ್ಡಾಯವಾಗಿ ಪೂರ್ಣಗೊಳಿಸಬೇಕಾಗಿದ್ದು, ಬಾಕಿ ಇರುವ ಫಲಾನುಭವಿಗಳು ನವೆಂಬರ್ 30ರೊಳಗೆ ಇ-ಕೆವೈಸಿ ಮಾಡಿಸಿಕೊಳ್ಳುವಂತೆ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸೂಚಿಸಿದೆ.

ಜಿಲ್ಲೆಯಲ್ಲಿ ಇ-ಕೆವೈಸಿ ನವೀಕರಣಕ್ಕೆ ಐದು ವರ್ಷ ಪೂರೈಸಿರುವ ಒಟ್ಟು 9,50,029 ಫಲಾನುಭವಿಗಳ ಪೈಕಿ 7,86,143 ಫಲಾನುಭವಿಗಳ ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಂಡಿದೆ. ಇನ್ನೂ 1,63,886 ಫಲಾನುಭವಿಗಳ ಇ-ಕೆವೈಸಿ ಪ್ರಕ್ರಿಯೆ ಬಾಕಿ ಉಳಿದಿದ್ದು, ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಸಂಬಂಧಪಟ್ಟ ನ್ಯಾಯಬೆಲೆ ಅಂಗಡಿಗಳ ವಿತರಕರಿಗೆ ಸೂಚನೆ ನೀಡಲಾಗಿದೆ.

ಇ-ಕೆವೈಸಿ ಬಾಕಿ ಇರುವ ಫಲಾನುಭವಿಗಳು ತಮ್ಮ ಪಡಿತರ ಚೀಟಿಗೆ ಜೋಡಣೆಯಾಗಿರುವ ನ್ಯಾಯಬೆಲೆ ಅಂಗಡಿಗೆ ಖುದ್ದಾಗಿ ಭೇಟಿ ನೀಡಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು. ಅಲ್ಲದೆ, ಸರ್ಕಾರವು 'ಅನ್ನ ಸೇವೆ' ಮೊಬೈಲ್ ಆ್ಯಪ್ ಮೂಲಕವೂ ಇ-ಕೆವೈಸಿ ಮಾಡಿಸಿಕೊಳ್ಳಲು ಅವಕಾಶ ಕಲ್ಪಿಸಿದೆ ಎಂದು ಇಲಾಖೆ ತಿಳಿಸಿದೆ.

ಇ-ಕೆವೈಸಿ ಪ್ರಕ್ರಿಯೆಯು ಸಂಪೂರ್ಣ ಉಚಿತವಾಗಿದ್ದು, ಇದಕ್ಕಾಗಿ ಫಲಾನುಭವಿಗಳು ಯಾವುದೇ ಶುಲ್ಕ ಪಾವತಿಸುವ ಅಗತ್ಯವಿಲ್ಲ. ನ್ಯಾಯಬೆಲೆ ಅಂಗಡಿಗಳಲ್ಲಿ ಇ-ಕೆವೈಸಿ ಮಾಡಿಸಿಕೊಳ್ಳುವ ಸಂದರ್ಭದಲ್ಲಿಯೂ ಯಾವುದೇ ಹಣ ನೀಡಬಾರದು ಎಂದು ಸ್ಪಷ್ಟಪಡಿಸಲಾಗಿದೆ.

ಬಾಕಿ ಇರುವ ಎಲ್ಲ ಫಲಾನುಭವಿಗಳು ನವೆಂಬರ್ 30ರೊಳಗೆ ಇ-ಕೆವೈಸಿ ಪ್ರಕ್ರಿಯೆಯನ್ನು ಕಡ್ಡಾಯವಾಗಿ ಪೂರ್ಣಗೊಳಿಸಬೇಕು. ನಿಗದಿತ ಅವಧಿಯೊಳಗೆ ಇ-ಕೆವೈಸಿ ಮಾಡಿಸಿಕೊಳ್ಳದ ಫಲಾನುಭವಿಗಳ ಹೆಸರನ್ನು ಮುಂದಿನ ದಿನಗಳಲ್ಲಿ ಪಡಿತರ ಚೀಟಿಯಿಂದ ತೆಗೆದುಹಾಕಲು ಕ್ರಮ ಕೈಗೊಳ್ಳಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.

ಪಡಿತರ ಸೌಲಭ್ಯಗಳು ನಿರಂತರವಾಗಿ ದೊರೆಯುವಂತೆ ನೋಡಿಕೊಳ್ಳಲು ಫಲಾನುಭವಿಗಳು ಕೊನೆಯ ದಿನಾಂಕದವರೆಗೆ ಕಾಯದೆ, ಆದಷ್ಟು ಬೇಗ ಇ-ಕೆವೈಸಿ ಪ್ರಕ್ರಿಯೆಯನ್ನು ಪೂರ್ಣಗೊಳಿಸುವಂತೆ ಇಲಾಖೆ ಮನವಿ ಮಾಡಿದೆ.

ನ. 13ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

ರಾಯಚೂರು, ನ. 11 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ನವೆಂಬರ್ 13ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನಕುಮಾರ ಸಂಗೇಪಾಗ್ ತಿಳಿಸಿದ್ದಾರೆ.

ಈ ನೇರ ಸಂದರ್ಶನದಲ್ಲಿ ವಿವಿಧ ಖಾಸಗಿ ಕಂಪನಿಗಳು ಭಾಗವಹಿಸಿ, ತಮ್ಮ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿವೆ.

18ರಿಂದ 28 ವರ್ಷ ವಯೋಮಿತಿಯೊಳಗಿನ ಎಲ್ಲ ಪದವೀಧರ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ. ಉದ್ಯೋಗಾಕಾಂಕ್ಷಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಛಾಯಾಪ್ರತಿಗಳು, ಸ್ವವಿವರ ಪತ್ರ (ಬಯೋಡೇಟಾ), ಆಧಾರ್ ಕಾರ್ಡ್ ಪ್ರತಿ ಹಾಗೂ ಇತ್ತೀಚಿನ ಭಾವಚಿತ್ರಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ನೋಂದಣಿ ಅಥವಾ ಸಂದರ್ಶನ ಶುಲ್ಕ ಇರುವುದಿಲ್ಲ. ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗಬೇಕಾಗುತ್ತದೆ ಎಂದು ತಿಳಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ನಿಗದಿತ ದಿನಾಂಕದಂದು ರಾಯಚೂರು ನಗರದ ಸ್ಟೇಷನ್ ಏರಿಯಾದ ಗೂಡ್ಸ್ ಶೆಡ್ ರಸ್ತೆಯಲ್ಲಿರುವ ಬಾಲಾಜಿ ಕಾಂಪ್ಲೆಕ್ ್ನ ನೆಲಮಹಡಿಯ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರಕ್ಕೆ ಭೇಟಿ ನೀಡಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ದೂರವಾಣಿ ಸಂಖ್ಯೆಗಳಾದ 08532-231684, 8197930236, 9008211750 ಹಾಗೂ 9916931616ಕ್ಕೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನಕುಮಾರ ಸಂಗೇಪಾಗ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಮೃತ ವಾಣಿ

ಮಾನವನ ಜೀವನದಲ್ಲಿ ಸಂಸ್ಕಾರವು ವ್ಯಕ್ತಿತ್ವದ ಅಡಪಾಯವಾಗಿದೆ.

1645 ನೇಯ ದಿನಕ್ಕೆ ಏಮ್ಸ್ ಹೋರಾಟ

ಬಾಲ ಕಾರ್ಮಿಕ ಕಾಯ್ದೆ ಉಲ್ಲಂಘನೆ: ಆರೋಪಿಗೆ 6 ತಿಂಗಳ ಜೈಲು ಶಿಕ್ಷೆ, ₹20 ಸಾವಿರ ದಂಡ



ರಾಯಚೂರು, ನ.11: ಬಾಲ ಕಾರ್ಮಿಕ ಪದ್ಧತಿ ನಿಷೇಧ ಕಾಯ್ದೆ ಉಲ್ಲಂಘಿಸಿದ ಪ್ರಕರಣದಲ್ಲಿ ದೇವದುರ್ಗ ಪಟ್ಟಣದ ನಿವಾಸಿಯೊಬ್ಬರಿಗೆ ಆರು ತಿಂಗಳ ಕಾರಾಗೃಹ ಶಿಕ್ಷೆ ಹಾಗೂ ₹20 ಸಾವಿರ ದಂಡ ವಿಧಿಸಿ ದೇವದುರ್ಗದ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ತೀರ್ಪು ನೀಡಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ ಐಪಿಎಸ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೇವದುರ್ಗ ನಿವಾಸಿ ಅಬೂಬಕರ್ ಸಿದ್ದಿಕಿ, ತಂದೆ ದಾವೂದ್‌ಸಾಬ್ ಶಿಕ್ಷೆಗೆ ಗುರಿಯಾದ ವ್ಯಕ್ತಿ.

ಬಾಲ ಕಾರ್ಮಿಕ ಕಾಯ್ದೆ ಉಲ್ಲಂಘನೆಗೆ ಸಂಬಂಧಿಸಿದಂತೆ ದೇವದುರ್ಗ ಪೊಲೀಸ್ ಠಾಣೆಯಲ್ಲಿ 2023ರಲ್ಲಿ ಅಪರಾಧ ಸಂಖ್ಯೆ 418/2023ರ ಅಡಿಯಲ್ಲಿ ಬಾಲ ಕಾರ್ಮಿಕ ಕಾಯ್ದೆಯ ಕಲಂ 3 ಮತ್ತು 14(ಎ) ಪ್ರಕಾರ ಪ್ರಕರಣ ದಾಖಲಿಸಲಾಗಿತ್ತು.

ಪ್ರಕರಣದ ತನಿಖೆಯನ್ನು ದೇವದುರ್ಗ ಪೊಲೀಸ್ ಠಾಣೆಯ ಸಹಾಯಕ ಪೊಲೀಸ್ ಉಪನಿರೀಕ್ಷಕ ಮಹಿಮೂದ್ ಪಾಷಾ ಅವರು ಕೈಗೊಂಡು, ಅಗತ್ಯ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ ದೇವದುರ್ಗದ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ದೇವದುರ್ಗದ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ ರಫೀಕ್ ಅಹಮದ್ ಅವರು, ಸರ್ಕಾರದ ಪರ ಮತ್ತು ಆರೋಪಿಯ ಪರ ಮಂಡಿಸಲಾದ ವಾದ-ಪ್ರತಿವಾದಗಳನ್ನು ಆಲಿಸಿ, ಸಾಕ್ಷ್ಯಾಧಾರಗಳನ್ನು ಪರಿಶೀಲಿಸಿದರು.

ವಿಚಾರಣೆಯಲ್ಲಿ ಆರೋಪಿ ಅಬೂಬಕರ್ ಸಿದ್ದಿಕಿ ಬಾಲ ಕಾರ್ಮಿಕ ಕಾಯ್ದೆಯಡಿ ಅಪರಾಧ ಎಸಗಿರುವುದು ಸಾಬೀತಾಗಿದೆ ಎಂದು ಪರಿಗಣಿಸಿದ ನ್ಯಾಯಾಲಯವು, ಅಕ್ಟೋಬರ್ 3, 2026ರಂದು ಆರು ತಿಂಗಳ ಕಾರಾಗೃಹ ಶಿಕ್ಷೆ ಹಾಗೂ ₹20 ಸಾವಿರ ದಂಡ ವಿಧಿಸಿ ತೀರ್ಪು ಪ್ರಕಟಿಸಿದೆ.

ಪ್ರಕರಣದಲ್ಲಿ ಸರ್ಕಾರದ ಪರವಾಗಿ ದೇವದುರ್ಗದ ಸಹಾಯಕ ಸರ್ಕಾರಿ ಅಭಿಯೋಜಕ ಹನುಮೇಶ ನಾಯಕ ವಾದ ಮಂಡಿಸಿದರು.

ದೇವದುರ್ಗ ಪೊಲೀಸ್ ಠಾಣೆಯ ಪೊಲೀಸ್ ಕಾನ್‌ಸ್ಟೆಬಲ್ ಶಿವಕುಮಾರ ಅವರು ಇಲಾಖೆಯ ನಿರ್ದೇಶನದಂತೆ ಸಾಕ್ಷಿದಾರರನ್ನು ನಿಗದಿತ ಸಮಯದಲ್ಲಿ ನ್ಯಾಯಾಲಯಕ್ಕೆ ಹಾಜರುಪಡಿಸುವ ಮೂಲಕ ವಿಚಾರಣಾ ಪ್ರಕ್ರಿಯೆಗೆ ಸಹಕರಿಸಿದರು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಡಪನೂರುಮೀರಾಪುರ ರಸ್ತೆ ಸೇತುವೆ ಕಾಮಗಾರಿಯಲ್ಲಿ ಕಳಪೆ ಆರೋಪ: ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ಆಗ್ರಹ

ಲಿಖಿತ ದೂರು ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಕಾಮಗಾರಿಯ ಗುಣಮಟ್ಟ ಹಾಗೂ ಸ್ಥಳದ ಕುರಿತು ಪರಿಶೀಲನೆ ನಡೆಸಬೇಕಾದ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರಾಯಚೂರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಹ ಕಾಮಗಾರಿಯ ಕುರಿತು ವಾಸ್ತವಾಂಶಗಳನ್ನು ಪರಿಶೀಲಿಸಿ, ಸೂಕ್ತ ಅಭಿಪ್ರಾಯದೊಂದಿಗೆ ವರದಿ ಸಲ್ಲಿಸುವಂತೆ ಸಂಬಂಧಪಟ್ಟ ಕಾರ್ಯನಿರ್ವಾಹಕ ಎಂಜಿನಿಯರ್‌ಗೆ ಪತ್ರದ ಮೂಲಕ ಸೂಚಿಸಿದ್ದಾರೆ. ಆದಾಗ್ಯೂ, ಇದುವರೆಗೂ ಯಾವುದೇ ವರದಿ ಸಲ್ಲಿಸದೆ ಅಧಿಕಾರಿಗಳು ಬೇಜವಾಬ್ದಾರಿಯಿಂದ ವರ್ತಿಸುತ್ತಿದ್ದಾರೆ ಎಂದು ದೂರಿದರು.

ಸಾರ್ವಜನಿಕರ ಅನುಕೂಲಕ್ಕಾಗಿ ಸರ್ಕಾರ ಲಕ್ಷಾಂತರ ರೂಪಾಯಿ ಅನುದಾನ ಬಿಡುಗಡೆ ಮಾಡಿದ್ದರೂ ಕಾಮಗಾರಿಯನ್ನು ನಿಗದಿತ ಸ್ಥಳದಲ್ಲಿ ಹಾಗೂ ಗುಣಮಟ್ಟದೊಂದಿಗೆ ಪೂರ್ಣಗೊಳಿಸದಿರುವುದು ಗಂಭೀರ ವಿಷಯವಾಗಿದೆ. ಇಂತಹ ಕಾಮಗಾರಿಗಳಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆ ಕಾಪಾಡುವುದು ಸಂಬಂಧಪಟ್ಟ ಇಲಾಖೆಯ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಈ ಹಿನ್ನೆಲೆಯಲ್ಲಿ ಇಡಪನೂರುಮೀರಾಪುರ ರಸ್ತೆ ಹಾಗೂ ಸೇತುವೆ ನಿರ್ಮಾಣ ಕಾಮಗಾರಿಯ ಕುರಿತು ಸ್ವತಂತ್ರ ತಾಂತ್ರಿಕ ತಂಡದಿಂದ ಸ್ಥಳ ಪರಿಶೀಲನೆ ನಡೆಸಬೇಕು. ಮಂಜೂರಾದ ಅಂದಾಜುಪಟ್ಟಿ, ಕಾಮಗಾರಿ ನಡೆದಿರುವ ಸ್ಥಳ, ಬಳಸಿರುವ ಸಾಮಗ್ರಿಗಳ ಗುಣಮಟ್ಟ ಹಾಗೂ ವೆಚ್ಚದ ವಿವರಗಳನ್ನು ಸಮಗ್ರವಾಗಿ ತನಿಖೆ ಮಾಡಬೇಕು ಎಂದು ಒತ್ತಾಯಿಸಿದರು.

ತನಿಖೆಯಲ್ಲಿ ಅಕ್ರಮ ಅಥವಾ ಕಳಪೆ ಕಾಮಗಾರಿ ನಡೆದಿರುವುದು ದೃಢಪಟ್ಟಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ತನಿಖೆ ಪೂರ್ಣಗೊಳ್ಳುವವರೆಗೆ ಕಾಮಗಾರಿಗೆ ಸಂಬಂಧಿಸಿದ ಯಾವುದೇ ಬಿಲ್ ಮಂಜೂರು ಮಾಡಬಾರದು ಎಂದು ಆಗ್ರಹಿಸಿದರು.

ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಈ ದೂರನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ನ್ಯಾಯಾಲಯದ ಮೊರೆ ಹೋಗುವುದು ಅನಿವಾರ್ಯವಾಗಲಿದೆ ಎಂದು ಯೋಹಾನ್ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ವಿಜಯಸ್ವಾಮಿ, ಸನಾವುಲ್ಲಾ ಹಾಗೂ ನರಸಿಂಹ ರಾಠೋಡ್ ಉಪಸ್ಥಿತರಿದ್ದರು.

ಓಬವ್ವ ನಮ್ಮೆಲ್ಲರಿಗೂ ಸದಾ ಸ್ಫೂರ್ತಿದಾಯಕ: ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರು

ಮಹಿಳೆಯರು ಮುನ್ನಡೆಯಬೇಕಿದೆ ಎಂದು ತಿಳಿಸಿದರು.

ಹೆಣ್ಣುಮಕ್ಕಳು ಎಲ್ಲ ಕ್ಷೇತ್ರಗಳಲ್ಲಿಯೂ ಧೈರ್ಯದಿಂದ ಮುನ್ನಡೆಯಬೇಕು. ಕಾನೂನುಗಳು ಹಾಗೂ ಸರ್ಕಾರದ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ಪ್ರತಿಯೊಬ್ಬ ಹೆಣ್ಣುಮಗಳೂ ಧೈರ್ಯವನ್ನು ಮೈಗೂಡಿಸಿಕೊಂಡು ಸಮಾಜದಲ್ಲಿ ಮುಂಚೂಣಿಗೆ ಬರಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ರಾಯಚೂರು ತಹಶೀಲ್ದಾರ್ ಸುರೇಶ್ ವರ್ಮಾ ಮಾತನಾಡಿ, ದೇಶದ ರಕ್ಷಣೆಗಾಗಿ ಒನಕೆಯನ್ನೇ ಶಸ್ತ್ರವನ್ನಾಗಿಸಿಕೊಂಡ ಧೀರಮಾತೆ ಒನಕೆ ಓಬವ್ವ. ಇತಿಹಾಸದಲ್ಲಿ ರಾಜವಂಶಗಳಲ್ಲಿ ಜನಿಸಿ, ಯುದ್ಧ ತರಬೇತಿ ಪಡೆದು ಶತ್ರುಸೈನ್ಯವನ್ನು ಎದುರಿಸಿದ ಅನೇಕ ವೀರರಾಣಿಯರನ್ನು ಕಾಣುತ್ತೇವೆ. ಆದರೆ, ಒನಕೆ ಓಬವ್ವ ಯಾವುದೇ ರಾಜಮನೆತನದಲ್ಲಿ ಜನಿಸಿದವರಲ್ಲ. ಸೈನಿಕ ತರಬೇತಿ ಪಡೆದವರಲ್ಲ. ಶಸ್ತ್ರಾಸ್ತ್ರಗಳನ್ನು ಬಳಸುವ ಅಭ್ಯಾಸವೂ ಅವರಿಗಿರಲಿಲ್ಲ. ಸಾಮಾನ್ಯ ಕುಟುಂಬದಲ್ಲಿ ಜನಿಸಿದ ಮಹಿಳೆಯೊಬ್ಬರು ನಾಡಿನ ರಕ್ಷಣೆಯ ಅಗತ್ಯ ಎದುರಾದಾಗ ಅಸಾಮಾನ್ಯ ಸಾಹಸ ಮೆರೆದರು ಎಂದು ಹೇಳಿದರು.

ಮದಕರಿ ನಾಯಕನ ಕೋಟೆಯನ್ನು ವಶಪಡಿಸಿಕೊಳ್ಳಲು ಹೈದರಾಲಿಯ ಸೈನ್ಯ ಪ್ರಯತ್ನಿಸಿದ ಸಂದರ್ಭದಲ್ಲಿ ಒನಕೆ ಓಬವ್ವ ತಮ್ಮ ಪ್ರಾಣವನ್ನು ಲೆಕ್ಕಿಸದೆ ಶತ್ರುಸೈನಿಕರನ್ನು ಒಬ್ಬೊಬ್ಬರಾಗಿ ಒನಕೆಯಿಂದ ಹೊಡೆದುರುಳಿಸಿ ನಾಡನ್ನು ರಕ್ಷಿಸಿದರು. ಅವರ ಧೈರ್ಯ, ಸಮಯಪ್ರಜ್ಞೆ ಮತ್ತು ದೇಶಾಭಿಮಾನ ಇಂದಿನ ಪೀಳಿಗೆಗೆ ಮಾದರಿಯಾಗಿದೆ. ಇಂತಹ ವೀರವನಿತೆಯ ಆದರ್ಶಗಳನ್ನು ನಾವೆಲ್ಲರೂ ಮೈಗೂಡಿಸಿಕೊಂಡು ದೇಶಾಭಿಮಾನವನ್ನು ಬೆಳೆಸಿಕೊಳ್ಳಬೇಕಿದೆ ಎಂದರು.

ವಿಶೇಷ ಉಪನ್ಯಾಸ ನೀಡಿದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ವಿಭಾಗದ ಸಂಯೋಜಕ ಡಾ. ಶರಣಪ್ಪ ಚಲವಾದಿ ಮಾತನಾಡಿ, ಇಂದಿನ ಆಧುನಿಕ ಯುಗದಲ್ಲಿಯೂ ಮಹಿಳೆಯರು ತಮ್ಮ ಆತ್ಮಗೌರವ, ರಕ್ಷಣೆ ಹಾಗೂ ಹಕ್ಕುಗಳಿಗಾಗಿ ಹೋರಾಡಬೇಕಾದ ಅನಿವಾರ್ಯತೆ ಇದೆ. ಕಷ್ಟದ ಸಂದರ್ಭಗಳಲ್ಲಿ ಎದೆಗುಂದದೆ, ಒನಕೆ ಓಬವ್ವ ಅವರಂತಹ ವೀರನಾರಿಯರ ಧೈರ್ಯ, ಸಾಹಸ ಹಾಗೂ ಸಮಯಪ್ರಜ್ಞೆಯನ್ನು ಪ್ರತಿಯೊಬ್ಬ ಮಹಿಳೆಯೂ ಮೈಗೂಡಿಸಿಕೊಳ್ಳಬೇಕು. ದೇಶ ಮತ್ತು ಸಮಾಜದ ರಕ್ಷಣೆಗಾಗಿ ಧೈರ್ಯದಿಂದ ನಿಲ್ಲುವ ಗುಣವೇ ನಿಜವಾದ ಸ್ತ್ರೀಶಕ್ತಿಯ ಪ್ರತೀಕವಾಗಿದೆ ಎಂದು ಅಭಿಪ್ರಾಯಪಟ್ಟರು.

ವೀರರಾಣಿ ಒನಕೆ ಓಬವ್ವ ಜಯಂತಿ ಅಂಗವಾಗಿ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಒನಕೆ ಓಬವ್ವ ಅವರ ಭಾವಚಿತ್ರಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ, ರಾಯಚೂರು ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೋಪಾಲ ಗೆಣ್ಣೂರು ಸೇರಿದಂತೆ ವಿವಿಧ ಗಣ್ಯರು ಹಾಗೂ ಸಮಾಜದ ಮುಖಂಡರು ಮಾಲಾರ್ಪಣೆ ಮಾಡುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು.

ಮೆರವಣಿಗೆಯು ಡಾ. ಬಿ.ಆರ್. ಅಂಬೇಡ್ಕರ್ ಮಾರ್ಗವಾಗಿ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರಕ್ಕೆ ತಲುಪಿತು. ಮೆರವಣಿಗೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ವಿವಿಧ ಕಲಾತಂಡಗಳು ಭಾಗವಹಿಸಿದ್ದವು.

ಈ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಪರಿಸರ ವಿಭಾಗದ ಸಹಾಯಕ ಅಭಿಯಂತರ ಜೈಪಾಲ್ ರೆಡ್ಡಿ, ಸಮಾಜದ ಮುಖಂಡರಾದ ಮಲ್ಲೇಶ ಕೋಮಿನಿ, ಲಲಿತಾ ಅಂಜಿನೇಯ, ಜಗನ್ನಾಥ ಸುಂಕರಿ, ಅರ್ಚನಾ ಸುಂಕರಿ, ಸಂತೋಷ ನಂದಿ, ಮಾರೆಪ್ಪ, ಎಂ. ವಸಂತ, ದಯಾನಂದ, ಶಿವರಾಜ್, ವಿಶ್ವನಾಥ, ದೇವೇಂದ್ರ, ರಾಘವೇಂದ್ರ, ಭೀಮಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

ಗ್ರಾಮೀಣ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಆದ್ಯತೆ: ಬಸನಗೌಡ ದದ್ದಲ್

ಚಂದ್ರಬಂಡಾ ಗ್ರಾಮದಲ್ಲಿ ನಡೆದ ಶ್ರೀ ಬಂಡೆ ರಂಗನಾಥಸ್ವಾಮಿ ದೇವಸ್ಥಾನದ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ದೇವರ ದರ್ಶನ ಪಡೆದರು.

ವಡ್ಲಂದೊಡ್ಡಿ ಗ್ರಾಮದಲ್ಲಿ ₹45 ಲಕ್ಷ ವೆಚ್ಚದಲ್ಲಿ ನಿರ್ಮಾಣಗೊಂಡ ಮೂರು ಶಾಲಾ ಕೊಠಡಿಗಳನ್ನು ಉದ್ಘಾಟಿಸಿದರು. ಮಂಡಲಗೇರ ಗ್ರಾಮದ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ತರಗತಿ ಕೊಠಡಿಗಳ ಸ್ಥಿತಿಗತಿ ಹಾಗೂ ಶಾಲೆಯಲ್ಲಿರುವ ಮೂಲಸೌಕರ್ಯಗಳನ್ನು ಪರಿಶೀಲಿಸಿದರು.

ಸಿಂಗನೋಡಿ ಗ್ರಾಮದಲ್ಲಿ ಎರಡು ಶಾಲಾ ಕೊಠಡಿಗಳನ್ನು ಉದ್ಘಾಟಿಸಿ, ಹೆಚ್ಚುವರಿಯಾಗಿ ಎರಡು ಕೊಠಡಿಗಳ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದರು. ಈ ಕಾಮಗಾರಿಗಳಿಗೆ ಒಟ್ಟು ₹60 ಲಕ್ಷ ವೆಚ್ಚ ನಿಗದಿಪಡಿಸಲಾಗಿದೆ. ಇದೇ ಗ್ರಾಮದಲ್ಲಿ ₹25 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾದ ಡಾ. ಬಿ.ಆರ್. ಅಂಬೇಡ್ಕರ್ ಭವನವನ್ನು ಸಾರ್ವಜನಿಕ ಬಳಕೆಗೆ ಲೋಕಾರ್ಪಣೆ ಮಾಡಿದರು. ಶ್ರೀ ಧನಮ್ಮ ಹಾಗೂ ಕರೇಮ್ಮ ದೇವಸ್ಥಾನಗಳನ್ನೂ ಉದ್ಘಾಟಿಸಿದರು.

ಬಾಪುರ ಗ್ರಾಮದಲ್ಲಿ ರಸ್ತೆ ಸಂಪರ್ಕ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗಿದ್ದು, ಬಾಪುರದಿಂದ ಬಾಪುರ ತಾಂಡಾವರೆಗೆ ₹1.20 ಕೋಟಿ ಹಾಗೂ ಬಾಪುರದಿಂದ ಆಂಧ್ರಪ್ರದೇಶ ಗಡಿವರೆಗೆ ₹65 ಲಕ್ಷ ವೆಚ್ಚದ ರಸ್ತೆ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿದರು.

ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ₹46.50 ಲಕ್ಷ ವೆಚ್ಚದ ಎರಡು ಶಾಲಾ ಕೊಠಡಿಗಳನ್ನು ಉದ್ಘಾಟಿಸಿ, ಮತ್ತೊಂದು ಕೊಠಡಿ ನಿರ್ಮಾಣಕ್ಕೆ ಚಾಲನೆ ನೀಡಿದರು. ಜೊತೆಗೆ ₹20 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾದ ಗ್ರಂಥಾಲಯವನ್ನು ಉದ್ಘಾಟಿಸಿದರು. ಕರೇಮ್ಮ ದೇವಸ್ಥಾನ ನಿರ್ಮಾಣ ಕಾಮಗಾರಿಗೂ ಭೂಮಿಪೂಜೆ ನೆರವೇರಿಸಿದರು.

ಕಟ್ಲಟ್ಕೂರು ಗ್ರಾಮದಲ್ಲಿ ₹36.13 ಲಕ್ಷ ಅಂದಾಜು ವೆಚ್ಚದ ಎರಡು ಶಾಲಾ ಕೊಠಡಿಗಳ ನಿರ್ಮಾಣ ಹಾಗೂ ಕುಡಿಯುವ ನೀರಿನ ಪೂರೈಕೆ ಕಾಮಗಾರಿಗಳಿಗೆ ಚಾಲನೆ ನೀಡಿದರು.

ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಉತ್ತಮ ಶೈಕ್ಷಣಿಕ ವಾತಾವರಣ ಕಲ್ಪಿಸುವುದು, ಸುಗಮ ಸಾರಿಗೆ ಸಂಪರ್ಕ ಒದಗಿಸುವುದು ಹಾಗೂ ಸಾರ್ವಜನಿಕರಿಗೆ ಅಗತ್ಯ ಸೌಲಭ್ಯಗಳನ್ನು ತಲುಪಿಸುವ ನಿಟ್ಟಿನಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಮುಂದುವರಿಸಲಾಗುವುದು ಎಂದು ಶಾಸಕ ಬಸನಗೌಡ ದದ್ದಲ್ ತಿಳಿಸಿದರು.

10 ವರ್ಷದ ಬಾಲಕನ ಬಾಯಿಗೆ ಬಟ್ಟೆ ತುರುಕಿ ಅಮಾನುಷ ಹಲ್ಲೆ: ಆರು ಶಿಕ್ಷಕರ ವಿರುದ್ಧ ಪ್ರಕರಣ ದಾಖಲು

ಬಾಲಕನ ಎರಡೂ ಕಣ್ಣುಗಳು, ಕೆನ್ನೆ, ತಲೆ, ಬೆನ್ನು ಹಾಗೂ ಕೈಕಾಲುಗಳಿಗೆ ಹೊಡೆದ ಪರಿಣಾಮ ಗಂಭೀರ ಗಾಯಗಳಾಗಿವೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಹಲ್ಲೆಯಿಂದ ಬಾಲಕನ ಎರಡೂ ಕಣ್ಣುಗಳಲ್ಲಿ ರಕ್ತ ಹೆಪ್ಪುಗಟ್ಟಿ ದೃಷ್ಟಿ ಮಂಜಾಗಿದ್ದು, ತಲೆಗೆ ತೀವ್ರ ಒಳಪೆಟ್ಟಾಗಿ ಬಾವು ಕಾಣಿಸಿಕೊಂಡಿದೆ. ಬೆನ್ನು ಹಾಗೂ ಕೈಕಾಲುಗಳಿಗೂ ಒಳಗಾಯಗಳಾಗಿವೆ ಎಂದು ದೂರಿನಲ್ಲಿ ವಿವರಿಸಲಾಗಿದೆ.

ಇಷ್ಟೇ ಅಲ್ಲದೆ, ಬಾಲಕನ ಮೇಲೆ ಇನ್ನಷ್ಟು ಹಲ್ಲೆ ನಡೆಸಿದರೆ ಆತ ಚೆನ್ನಾಗಿ ಓದುತ್ತಾನೆ ಎಂದು ಇತರ ಆರೋಪಿತರು ಪ್ರಚೋದನೆ ನೀಡಿದ್ದರು. ಹಲ್ಲೆಯ ವಿಷಯವನ್ನು ಯಾರಿಗಾದರೂ ತಿಳಿಸಿದರೆ ಹೊಡೆದು ಕೊಲ್ಲುವುದಾಗಿ ಜೀವ ಬೆದರಿಕೆ ಹಾಕಿದ್ದಾರೆ ಎಂದೂ ಬಾಲಕನ ತಂದೆ ದೂರಿನಲ್ಲಿ ಆರೋಪಿಸಿದ್ದಾರೆ.

ಮಗನ ಮೇಲಿನ ಹಲ್ಲೆಯ ವಿಷಯ ತಿಳಿದ ಬಳಿಕ ತಂದೆ ಅಬ್ದುಲ್ ನಹೀಮ್ ಅವರು ಬಾಲಕನನ್ನು ಲಿಂಗಸುಗೂರು ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಿದ್ದಾರೆ. ನಂತರ ಕುಟುಂಬದ ಸದಸ್ಯರೊಂದಿಗೆ ಚರ್ಚಿಸಿ ನವೆಂಬರ್ 9ರಂದು ಸಂಜೆ 6.30ಕ್ಕೆ ಕವಿತಾಳ ಪೊಲೀಸ್ ಠಾಣೆಗೆ ಲಿಖಿತ ದೂರು ಸಲ್ಲಿಸಿದ್ದಾರೆ.

ಈ ಪ್ರಕರಣದಲ್ಲಿ ಶಿಕ್ಷಕ ಅಬ್ಬಾಸ್ (ಎ1), ಮುಖ್ಯಶಿಕ್ಷಕ ಹಾಜಮ್ ಮುಮುರಿ (ಎ2), ಶಿಕ್ಷಕ ಹುಸೇನ್ ಮುಮುರಿ (ಎ3), ಶಿಕ್ಷಕ ಜಾಯಿದ್ (ಎ4), ಶಿಕ್ಷಕ ಖುದ್ರತುಲ್ಲಾ (ಎ5) ಹಾಗೂ ಶಿಕ್ಷಕ ಇಮ್ರಾನ್ ಶೇಖ್ (ಎ6) ಅವರನ್ನು ಆರೋಪಿಗಳನ್ನಾಗಿ ಹೆಸರಿಸಲಾಗಿದೆ.

ದೂರಿನ ಆಧಾರದ ಮೇಲೆ ಕವಿತಾಳ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ 155/2026ರ ಅಡಿಯಲ್ಲಿ ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) 2023ರ ಕಲಂ 189(2), 191(2), 118(2), 54, 351(2) ಹಾಗೂ 190 ಮತ್ತು ಬಾಲನ್ಯಾಯ (ಮಕ್ಕಳ ಆರೈಕೆ ಮತ್ತು ರಕ್ಷಣೆ) ಕಾಯ್ದೆ 2015ರ ಕಲಂ 75 ಮತ್ತು 87ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಮಕ್ಕಳಿಗೆ ಶಿಕ್ಷಣ ಮತ್ತು ಶಿಸ್ತು ಕಲಿಸಬೇಕಾದ ಶಿಕ್ಷಕರ ವಿರುದ್ಧವೇ ಈ ರೀತಿಯ ಗಂಭೀರ ಹಲ್ಲೆ ಹಾಗೂ ಜೀವ ಬೆದರಿಕೆ ಆರೋಪಗಳು ಕೇಳಿಬಂದಿರುವುದು ಪ್ರಕರಣದ ಗಂಭೀರತೆಯನ್ನು ಹೆಚ್ಚಿಸಿದೆ. ಹಲ್ಲೆಯಿಂದ ಬಾಲಕನ ಕಣ್ಣುಗಳಿಗೆ ಉಂಟಾಗಿರುವ ಗಾಯಗಳು ಹಾಗೂ ಇತರ ಆರೋಪಿತರ ಪಾತ್ರದ ಕುರಿತು ಪೊಲೀಸ್ ತನಿಖೆಯಿಂದ ಹೆಚ್ಚಿನ ಮಾಹಿತಿ ಹೊರಬರಬೇಕಿದೆ.

ನವೆಂಬರ್ 9ರಂದು ದಾಖಲಾದ ಪ್ರಥಮ ವರ್ತಮಾನ ವರದಿ (ಎಫ್‌ಐಆರ್) ಪ್ರಕಾರ ಪೊಲೀಸರು ಪ್ರಕರಣದ ತನಿಖೆ ಕೈಗೊಂಡಿದ್ದಾರೆ. ಆರೋಪಗಳು ತನಿಖೆಯಲ್ಲಿ ದೃಢಪಡಬೇಕಿದ್ದು, ಆರೋಪಿಗಳ ಬಂಧನದ ಕುರಿತು ಎಫ್‌ಐಆರ್‌ನಲ್ಲಿ ಮಾಹಿತಿ ನೀಡಲಾಗಿಲ್ಲ.

ಉಚಿತ ಆರೋಗ್ಯ ತಪಾಸಣಾ ಶಿಬಿರ: ಸದುಪಯೋಗಕ್ಕೆ ಶಾಸಕ ಆರ್. ಬಸನಗೌಡ ಕರೆ

ಶಿಬಿರದಲ್ಲಿ ಸ್ತ್ರೀರೋಗ ಮತ್ತು ಪ್ರಸೂತಿ ಸಮಸ್ಯೆಗಳು, ಹೃದಯ ಸಂಬಂಧಿ ಕಾಯಿಲೆಗಳು, ಕಣ್ಣು, ಕಿವಿ, ಮೂಗು ಮತ್ತು ಗಂಟಲು ಸಮಸ್ಯೆಗಳಿಗೆ ತಪಾಸಣೆ ನಡೆಸಲಾಗುವುದು ಎಂದು ವಿವರಿಸಿದರು.

ಇದಲ್ಲದೆ ಮಧುಮೇಹ, ಅಧಿಕ ರಕ್ತದೊತ್ತಡ, ಕೀಲು ಮತ್ತು ಮೂಳೆ ಸಂಬಂಧಿ ಕಾಯಿಲೆಗಳು, ನರರೋಗ, ಮೂತ್ರರೋಗ, ದಂತ ಸಮಸ್ಯೆಗಳು, ಚರ್ಮರೋಗ, ಮಾನಸಿಕ ಆರೋಗ್ಯ ಸಮಸ್ಯೆಗಳು ಹಾಗೂ ಮಕ್ಕಳ ಕಾಯಿಲೆಗಳಿಗೆ ಸಂಬಂಧಿಸಿದಂತೆ ತಜ್ಞ ವೈದ್ಯರಿಂದ ತಪಾಸಣೆ ನಡೆಸಲಾಗುವುದು. ಆಯುಷ್ ವೈದ್ಯಕೀಯ ಸೇವೆಗಳನ್ನೂ ಶಿಬಿರದಲ್ಲಿ ಒದಗಿಸಲಾಗುತ್ತದೆ ಎಂದು ತಿಳಿಸಿದರು.

ಸಾರ್ವಜನಿಕರು ಆರೋಗ್ಯ ಸಮಸ್ಯೆಗಳನ್ನು ನಿರ್ಲಕ್ಷಿಸದೆ ಸಕಾಲದಲ್ಲಿ ವೈದ್ಯಕೀಯ ತಪಾಸಣೆ ಮಾಡಿಸಿಕೊಳ್ಳಬೇಕು. ರೋಗಗಳನ್ನು ಆರಂಭಿಕ ಹಂತದಲ್ಲಿಯೇ ಗುರುತಿಸುವುದರಿಂದ ಸೂಕ್ತ ಚಿಕಿತ್ಸೆ ಪಡೆಯಲು ಅನುಕೂಲವಾಗುತ್ತದೆ. ಆದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಶಿಬಿರದಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಕೆಪಿಸಿಸಿ ಸದಸ್ಯ ನಲ್ಲಾ ವೆಂಕಟೇಶ್ವರ ರಾವ್, ತಾಲೂಕು ಆರೋಗ್ಯಾಧಿಕಾರಿ ಅಯ್ಯನಗೌಡ ಹಾಗೂ ರವಿಗೌಡ ಮಲ್ಲದಗುಡ್ಡ ಉಪಸ್ಥಿತರಿದ್ದರು.

ಎಸ್ಪಿ ವಿರುದ್ಧ ಅವಾಚ್ಯ ಶಬ್ದಗಳಿಂದ ನಿಂದಿಸಿದ ಆರೋಪ: ವರ್ಗಾವಣೆಗೆ ಚಿನ್ನಯ್ಯ ನಾಯಕ ಆಗ್ರಹ

ಇದುವರೆಗೆ ತಮ್ಮ ಸಾರ್ವಜನಿಕ ಜೀವನದಲ್ಲಿ ಯಾವುದೇ ಕಪ್ಪುಚುಕ್ಕೆ ಇಲ್ಲದೆ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿದ್ದೇನೆ ಎಂದು ಹೇಳಿದರು.

ರೈತರ ಸಮಸ್ಯೆಗಳನ್ನು ಸರ್ಕಾರ ಹಾಗೂ ಆಡಳಿತದ ಗಮನಕ್ಕೆ ತರುವ ಉದ್ದೇಶದಿಂದ ಹೋರಾಟ ನಡೆಸುತ್ತಿರುವ ಸಂಘಟನೆಯ ಪದಾಧಿಕಾರಿಯೊಂದಿಗೆ ಜಿಲ್ಲೆಯ ಉನ್ನತ ಪೊಲೀಸ್ ಅಧಿಕಾರಿಯೊಬ್ಬರು ಈ ರೀತಿಯಾಗಿ ವರ್ತಿಸಿರುವುದು ಖಂಡನೀಯ. ಸಾರ್ವಜನಿಕರೊಂದಿಗೆ ಗೌರವಯುತವಾಗಿ ನಡೆದುಕೊಳ್ಳಬೇಕಾದ ಜವಾಬ್ದಾರಿಯುತ ಸ್ಥಾನದಲ್ಲಿರುವ ಅಧಿಕಾರಿಗಳಿಂದ ಇಂತಹ ವರ್ತನೆಯನ್ನು ನಿರೀಕ್ಷಿಸಿರಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ರೈತರ ಹಕ್ಕುಗಳು ಹಾಗೂ ನ್ಯಾಯಯುತ ಬೇಡಿಕೆಗಳಿಗಾಗಿ ದಶಕಗಳಿಂದ ಹೋರಾಟ ನಡೆಸುತ್ತಿರುವ ತಮ್ಮನ್ನು ಅವಮಾನಿಸಿರುವ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಬೇಕು. ಈ ಕುರಿತು ಸಂಬಂಧಪಟ್ಟ ಉನ್ನತ ಅಧಿಕಾರಿಗಳಿಗೆ ದೂರು ಸಲ್ಲಿಸಿದ್ದು, ಘಟನೆಗೆ ಸಂಬಂಧಿಸಿದಂತೆ ಸೂಕ್ತ ವಿಚಾರಣೆ ನಡೆಸಿ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ವರ್ತನೆಯ ಕುರಿತು ತನಿಖೆ ನಡೆಸಿ, ಅವರ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳಬೇಕು. ಅಲ್ಲದೆ, ಅವರನ್ನು ರಾಯಚೂರು ಜಿಲ್ಲೆಯಿಂದ ಬೇರೆ ಜಿಲ್ಲೆಗೆ ವರ್ಗಾವಣೆ ಮಾಡಬೇಕು ಎಂದು ಆಗ್ರಹಿಸಿದರು.

ತಮ್ಮ ದೂರಿನ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳದಿದ್ದರೆ ನ್ಯಾಯಕ್ಕಾಗಿ ನ್ಯಾಯಾಲಯದ ಮೊರೆ ಹೋಗುವುದಾಗಿ ಚಿನ್ನಯ್ಯ ನಾಯಕ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಸಮಿತಿಯ ಗೌರವಾಧ್ಯಕ್ಷ ಕೆ.ವಿ. ಸತ್ಯನಾರಾಯಣ ಹಾಗೂ ಎಚ್.ಎನ್. ರಾವ್ ಉಪಸ್ಥಿತರಿದ್ದರು.

ಸೆಂಟ್ರಲ್ ಕ್ಲಸ್ಟರ್ ಕಿಚನ್ ವ್ಯವಸ್ಥೆ ಕೈಬಿಡಲು ಅಕ್ಷರ ದಾಸೋಹ ನೌಕರರ ಸಂಘ ಆಗ್ರಹ



ದೇವದುರ್ಗ, ನ.11: ಬಿಸಿಯೂಟ ಸಿಬ್ಬಂದಿಯ ಉದ್ಯೋಗಕ್ಕೆ ಧಕ್ಕೆ ತರುವ ಸೆಂಟ್ರಲ್ ಕ್ಲಸ್ಟರ್ ಕಿಚನ್ ವ್ಯವಸ್ಥೆ ಜಾರಿಗೊಳಿಸುವ ನಿರ್ಧಾರವನ್ನು ಕೈಬಿಟ್ಟು, ಶಾಲೆಗಳಲ್ಲಿ ಬಿಸಿಯೂಟ ತಯಾರಿಸುವ ಸಂಪೂರ್ಣ ಜವಾಬ್ದಾರಿಯನ್ನು ಅಡುಗೆ ಸಿಬ್ಬಂದಿಗೆ ವಹಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ (ಸಿಐಟಿಯು ಸಂಯೋಜಿತ) ಪದಾಧಿಕಾರಿಗಳು ಬುಧವಾರ ಕ್ಷೇತ್ರ ಶಿಕ್ಷಣಾಧಿಕಾರಿ ರಾಧಾದೇವಿ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದಲ್ಲಿ ಮನವಿ ಸಲ್ಲಿಸಿದ ಸಂಘದ ಮುಖಂಡರು, ಬಿಸಿಯೂಟ ಯೋಜನೆಯಡಿ ಕ್ಲಸ್ಟರ್ ಕಿಚನ್ ವ್ಯವಸ್ಥೆ ಜಾರಿಗೊಳಿಸಲು ಶಿಕ್ಷಣ ಇಲಾಖೆ ಆದೇಶ ಹೊರಡಿಸಿರುವುದಕ್ಕೆ ವಿರೋಧ ವ್ಯಕ್ತಪಡಿಸಿದರು.

2001ರಿಂದ ಜಾರಿಯಲ್ಲಿರುವ ಬಿಸಿಯೂಟ ಯೋಜನೆಯು ಸರ್ಕಾರಿ ಶಾಲಾ ಮಕ್ಕಳ ಹಸಿವು ನೀಗಿಸುವುದರ ಜೊತೆಗೆ ಅವರ ಕಲಿಕಾ ಸಾಮರ್ಥ್ಯ ಹಾಗೂ ಶಾಲಾ ಹಾಜರಾತಿ ಹೆಚ್ಚಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ. ಆರು ವರ್ಷ ಮೇಲ್ಪಟ್ಟ ಮಕ್ಕಳಿಗೆ ಪೌಷ್ಟಿಕ ಆಹಾರವನ್ನು ಶಾಲೆಯಲ್ಲಿಯೇ ತಯಾರಿಸಿ, ತಾಜಾ ಊಟ ನೀಡಬೇಕೆಂಬ ಸುಪ್ರೀಂ ಕೋರ್ಟ್ ಆದೇಶವಿದೆ ಎಂದು ಸಂಘದ ಪದಾಧಿಕಾರಿಗಳು ತಿಳಿಸಿದರು.

ಈ ಉದ್ದೇಶಕ್ಕಾಗಿ ಸರ್ಕಾರ ಈಗಾಗಲೇ ಸಾವಿರಾರು ಕೋಟಿ ರೂಪಾಯಿ ವೆಚ್ಚದಲ್ಲಿ ಶಾಲೆಗಳಲ್ಲಿ ಅಡುಗೆ ಕೋಣೆಗಳನ್ನು ನಿರ್ಮಿಸಿ, ಅಗತ್ಯ ಸಾಮಗ್ರಿಗಳನ್ನು ಪೂರೈಸಿದೆ. ಇಂತಹ ಸಂದರ್ಭದಲ್ಲಿ ಸೆಂಟ್ರಲ್ ಕ್ಲಸ್ಟರ್ ಕಿಚನ್ ವ್ಯವಸ್ಥೆ ಆರಂಭಿಸಲು ಮುಂದಾಗಿರುವುದು ಸರಿಯಲ್ಲ. ಇದರಿಂದ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಬಿಸಿಯೂಟ ಸಿಬ್ಬಂದಿಯ ಉದ್ಯೋಗಕ್ಕೆ ಧಕ್ಕೆ ಉಂಟಾಗುವ ಆತಂಕವಿದೆ ಎಂದು ದೂರಿದರು.

ಬಿಸಿಯೂಟ ಯೋಜನೆಯ ಸಂಪೂರ್ಣ ಜವಾಬ್ದಾರಿಯನ್ನು ಮುಖ್ಯಶಿಕ್ಷಕರಿಗೆ ವಹಿಸುವ ಬದಲು ಅಡುಗೆ ಸಿಬ್ಬಂದಿಗೆ ನೀಡಬೇಕು. ಅಡುಗೆ ಸಿಬ್ಬಂದಿ ಹಾಗೂ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್‌ಡಿಎಂಸಿ) ಅಧ್ಯಕ್ಷರ ಜಂಟಿ ಖಾತೆಯ ಮೂಲಕ ಹಣಕಾಸು ವ್ಯವಹಾರ ನಡೆಸಲು ಅವಕಾಶ ಕಲ್ಪಿಸಬೇಕು. ಅಗತ್ಯವಿದ್ದಲ್ಲಿ ಅಡುಗೆ ಸಿಬ್ಬಂದಿಯ ಕೆಲಸದ ಅವಧಿಯನ್ನು ವಿಸ್ತರಿಸಬೇಕು ಎಂದು ಒತ್ತಾಯಿಸಿದರು.

ಶಾಲೆಗಳಲ್ಲಿ ಈಗಿರುವ ಅಡುಗೆ ಸಿಬ್ಬಂದಿಯೇ ಬಿಸಿಯೂಟ ತಯಾರಿಸುವ ವ್ಯವಸ್ಥೆಯನ್ನು ಮುಂದುವರಿಸಬೇಕು. ಸೆಂಟ್ರಲ್ ಕ್ಲಸ್ಟರ್ ಕಿಚನ್ ಪದ್ಧತಿಯು ಬಿಸಿಯೂಟ ಯೋಜನೆಯಲ್ಲಿ ಖಾಸಗಿ ಸಂಸ್ಥೆಗಳ ಹಸ್ತಕ್ಷೇಪಕ್ಕೆ ಅವಕಾಶ ಮಾಡಿಕೊಡುವ ಆತಂಕವಿದ್ದು, ಸರ್ಕಾರ ಕೂಡಲೇ ಈ ನಿರ್ಧಾರವನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಿಐಟಿಯು ಮುಖಂಡ ಗಿರಿಯಪ್ಪ ಪೂಜಾರಿ, ಸಂಘದ ಅಧ್ಯಕ್ಷೆ ಮರಿಯಮ್ಮ, ಕಾರ್ಯದರ್ಶಿ ಶ್ರೀಲೇಖಾ, ಲಕ್ಷ್ಮಿ, ಮಂಜುಳಾ, ರತ್ನಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಒನಕೆ ಓಬವ್ವ ಅವರ ಧೈರ್ಯ, ಸಾಹಸ ಮಹಿಳೆಯರಿಗೆ ಆದರ್ಶ: ವೆಂಕಟೇಶ ದೊಡ್ಡಮನಿ



ರಾಯಚೂರು, ನ.11: ವೀರವನಿತೆ ಒನಕೆ ಓಬವ್ವ ಅವರ ಕಾಯಕನಿಷ್ಠೆ, ಧೈರ್ಯ, ಸಾಹಸ ಹಾಗೂ ದೇಶಪ್ರೇಮ ನಾಡಿನ ಪ್ರತಿಯೊಬ್ಬ ಮಹಿಳೆಗೂ ಆದರ್ಶವಾಗಿದ್ದು, ವಿದ್ಯಾರ್ಥಿನಿಯರು ಅವರ ಜೀವನ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ಚನ್ನಬಸಮ್ಮ ಎಂ. ನಾಗಪ್ಪ ಬಾಲಕಿಯರ ಕಲಾ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ವೆಂಕಟೇಶ ದೊಡ್ಡಮನಿ ಹೇಳಿದರು.

ನಗರದ ತಾರನಾಥ ಶಿಕ್ಷಣ ಸಂಸ್ಥೆಯ ಸಂಚಾಲಿತ ಸಿಎಂಎನ್ ಪದವಿ ಪೂರ್ವ ಕಾಲೇಜಿನ ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ್ದ ವೀರವನಿತೆ ಒನಕೆ ಓಬವ್ವ ಹಾಗೂ ಮೌಲಾನಾ ಅಬುಲ್ ಕಲಾಂ ಆಜಾದ್ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಚಿತ್ರದುರ್ಗದ ಕೋಟೆಗೆ ಹೈದರಾಲಿಯ ಸೈನಿಕರು ನುಗ್ಗಲು ಪ್ರಯತ್ನಿಸಿದ ಸಂದರ್ಭದಲ್ಲಿ ಒನಕೆ ಓಬವ್ವ ಮನೆಯಲ್ಲಿದ್ದ ಒನಕೆಯನ್ನೇ ಆಯುಧವನ್ನಾಗಿಸಿಕೊಂಡು ಶತ್ರು ಸೈನಿಕರನ್ನು ಎದುರಿಸಿ ಕೋಟೆಯ ರಕ್ಷಣೆಗೆ ಮುಂದಾದರು. ಅವರ ಸಮಯಪ್ರಜ್ಞೆ, ಶೌರ್ಯ ಹಾಗೂ ಸ್ವಾಭಿಮಾನ ಇಂದಿನ ಪೀಳಿಗೆಗೆ ಸ್ಫೂರ್ತಿದಾಯಕವಾಗಿದೆ ಎಂದರು.

ಚಿತ್ರದುರ್ಗದ ಮದಕರಿ ನಾಯಕನ ಕೋಟೆಯ ಕಾವಲುಗಾರ ಕಹಳೆ ಮದ್ದಹನುಮಪ್ಪ ಅವರ ಪತ್ನಿಯಾಗಿದ್ದ ಓಬವ್ವ, ಸಾಮಾನ್ಯ ಕುಟುಂಬದಲ್ಲಿ ಜನಿಸಿದರೂ ಅಸಾಮಾನ್ಯ ಸಾಹಸದಿಂದ ಇತಿಹಾಸದಲ್ಲಿ ಶಾಶ್ವತ ಸ್ಥಾನ ಪಡೆದಿದ್ದಾರೆ. ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ರಾಣಿ ಅಬ್ಬಕ್ಕ ಅವರಂತೆ ಓಬವ್ವ ಕೂಡ ನಾಡಿನ ವೀರವನಿತೆಯರ ಸಾಲಿನಲ್ಲಿ ಗುರುತಿಸಿಕೊಂಡಿದ್ದಾರೆ ಎಂದು ತಿಳಿಸಿದರು.

ಉಪನ್ಯಾಸಕಿ ಸಲ್ಮಾ ಬಾನು ಮಾತನಾಡಿ, ಸ್ವತಂತ್ರ ಭಾರತದ ಪ್ರಥಮ ಶಿಕ್ಷಣ ಸಚಿವ ಮೌಲಾನಾ ಅಬುಲ್ ಕಲಾಂ ಆಜಾದ್ ಅವರ ಜನ್ಮದಿನವಾದ ನವೆಂಬರ್ 11ರಂದು ರಾಷ್ಟ್ರೀಯ ಶಿಕ್ಷಣ ದಿನ ಆಚರಿಸಲಾಗುತ್ತದೆ. 1888ರಲ್ಲಿ ಮೆಕ್ಕಾದಲ್ಲಿ ಜನಿಸಿದ ಆಜಾದ್ ಅವರು ಸ್ವಾತಂತ್ರ್ಯ ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ದೇಶದ ಶಿಕ್ಷಣ ವ್ಯವಸ್ಥೆಯ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದರು.

ಪ್ರಾಥಮಿಕ ಶಿಕ್ಷಣ, ವಯಸ್ಕರ ಶಿಕ್ಷಣ ಹಾಗೂ ಉನ್ನತ ಶಿಕ್ಷಣದ ಅಭಿವೃದ್ಧಿಗೆ ಆದ್ಯತೆ ನೀಡಿದ್ದ ಆಜಾದ್ ಅವರ ಸೇವೆಯನ್ನು ಪರಿಗಣಿಸಿ 1992ರಲ್ಲಿ ಮರಣೋತ್ತರವಾಗಿ ಭಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ವಿದ್ಯಾರ್ಥಿಗಳು ಅವರ ಶೈಕ್ಷಣಿಕ ಚಿಂತನೆಗಳನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯರಾದ ಪಾರ್ವತಿ, ಸುಹಾಸಿನಿ ಹಾಗೂ ಕೆ. ಅಕ್ಷಿತಾ ಮಹನೀಯರ ಭಾವಚಿತ್ರಗಳಿಗೆ ಮಾಲಾರ್ಪಣೆ ಮಾಡಿದರು. ಶೈಲಾಶ್ರೀ ಪೂಜೆ ಸಲ್ಲಿಸಿದರು.

ಉಪನ್ಯಾಸಕರಾದ ಶಿವಲೀಲಾ, ರೇಣುಕಾ, ರಾಘಮ್ಮ, ವಿದ್ಯಾಶ್ರೀ, ಗೋವಿಂದರಾಜ್, ಭೀಮಣ್ಣ ಭಂಡಾರಿ, ಬೋಧಕೇತರ ಸಿಬ್ಬಂದಿ ಮಂಜುಳಾ, ಇಮ್ರಾನ್ ಪಾಷಾ, ರೋಹಿತ್, ಲಲಿತಮ್ಮ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಆಧುನಿಕ ರಸಾಯನಶಾಸ್ತ್ರದಲ್ಲಿ ಸ್ಪೆಕ್ಟ್ರೋಸ್ಕೋಪಿಕ್ ತಂತ್ರಗಳ ಪಾತ್ರ ಮಹತ್ವದ್ದು: ಡಾ. ಲತಾ ಎಂ.ಎಸ್.



ರಾಯಚೂರು, ನ.11: ಆಧುನಿಕ ರಸಾಯನಶಾಸ್ತ್ರದಲ್ಲಿ ಅಣುಗಳ ರಚನೆ, ವಸ್ತುಗಳ ಗುಣಲಕ್ಷಣ ಹಾಗೂ ಅವುಗಳ ಸಂಯೋಜನೆಯನ್ನು ಗುರುತಿಸುವಲ್ಲಿ ಸ್ಪೆಕ್ಟ್ರೋಸ್ಕೋಪಿಕ್ ತಂತ್ರಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ರಸಾಯನಶಾಸ್ತ್ರ ವಿಭಾಗದ ಸಹಪ್ರಾಧ್ಯಾಪಕಿ ಡಾ. ಲತಾ ಎಂ.ಎಸ್. ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಆಂತರಿಕ ಗುಣಮಟ್ಟ ಭರವಸೆ ಕೋಶ (ಐಕ್ಯೂಎಸಿ) ಹಾಗೂ ರಸಾಯನಶಾಸ್ತ್ರ ವಿಭಾಗದ ಸಂಯುಕ್ತಾಶ್ರಯದಲ್ಲಿ ಕಾಲೇಜಿನ ಯೋಗ ಸಭಾಂಗಣದಲ್ಲಿ ಆಯೋಜಿಸಿದ್ದ ಸ್ಪೆಕ್ಟ್ರೋಸ್ಕೋಪಿಕ್ ತಂತ್ರಗಳ ಮೂಲಭೂತ ತತ್ವಗಳು ಮತ್ತು ಅನ್ವಯಗಳು ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಅವರು ಮಾತನಾಡಿದರು.

ಸ್ಪೆಕ್ಟ್ರೋಸ್ಕೋಪಿಕ್ ತಂತ್ರಗಳು ವೈಜ್ಞಾನಿಕ ಸಂಶೋಧನೆ ಹಾಗೂ ಪ್ರಯೋಗಾಲಯ ಅಧ್ಯಯನದಲ್ಲಿ ಪ್ರಮುಖ ಸ್ಥಾನ ಪಡೆದಿವೆ. ವಿದ್ಯುತ್ಕಾಂತೀಯ ವಿಕಿರಣ ಮತ್ತು ದ್ರವ್ಯದ ನಡುವಿನ ಪರಸ್ಪರ ಕ್ರಿಯೆಯನ್ನು ಅಧ್ಯಯನ ಮಾಡುವ ಮೂಲಕ ವಸ್ತುಗಳ ರಚನೆ ಹಾಗೂ ಗುಣಲಕ್ಷಣಗಳನ್ನು ವಿಶ್ಲೇಷಿಸಲು ಸಾಧ್ಯವಾಗುತ್ತದೆ ಎಂದು ವಿವರಿಸಿದರು.

ರಸಾಯನಶಾಸ್ತ್ರದ ವಿದ್ಯಾರ್ಥಿನಿಯರು ಪಠ್ಯಪುಸ್ತಕಗಳ ಅಧ್ಯಯನದ ಜೊತೆಗೆ ಆಧುನಿಕ ವೈಜ್ಞಾನಿಕ ತಂತ್ರಜ್ಞಾನಗಳ ಮೂಲತತ್ವಗಳನ್ನು ಅರಿತುಕೊಳ್ಳಬೇಕು. ಸೈದ್ಧಾಂತಿಕ ಜ್ಞಾನವನ್ನು ಪ್ರಾಯೋಗಿಕ ಅಧ್ಯಯನದೊಂದಿಗೆ ಸಂಯೋಜಿಸಿಕೊಂಡಾಗ ವಿಷಯದ ಕುರಿತು ಹೆಚ್ಚಿನ ತಿಳಿವಳಿಕೆ ಪಡೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲೆ ಡಾ. ಸುಗುಣ ಬಸವರಾಜ್ ಮಾತನಾಡಿ, ವಿದ್ಯಾರ್ಥಿನಿಯರಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಲು ಇಂತಹ ವಿಶೇಷ ಉಪನ್ಯಾಸಗಳು ಸಹಕಾರಿಯಾಗುತ್ತವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮವು ಪ್ರಾರ್ಥನಾಗೀತೆಯೊಂದಿಗೆ ಆರಂಭವಾಯಿತು. ಗಣ್ಯರು ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕಾಲೇಜಿನ ಭೌತಶಾಸ್ತ್ರ ವಿಭಾಗದ ಸಹಪ್ರಾಧ್ಯಾಪಕಿ ಹಾಗೂ ಐಕ್ಯೂಎಸಿ ಸಂಯೋಜಕಿ ಡಾ. ಜ್ಯೋತಿ ಸಿ.ಕೆ. ಮುಖ್ಯ ಭಾಷಣ ಮಾಡಿದರು.

ರಸಾಯನಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಹಾಗೂ ವೆಬ್‌ಸೈಟ್ ಸಂಯೋಜಕಿ ಡಾ. ಅಸ್ಮಾ ಅವರು ಸಂಪನ್ಮೂಲ ವ್ಯಕ್ತಿ ಡಾ. ಲತಾ ಎಂ.ಎಸ್. ಅವರನ್ನು ಪರಿಚಯಿಸಿದರು.

ಇದೇ ಸಂದರ್ಭದಲ್ಲಿ ಡಾ. ಲತಾ ಎಂ.ಎಸ್. ಅವರನ್ನು ಪ್ರಾಂಶುಪಾಲೆ ಡಾ. ಸುಗುಣ ಬಸವರಾಜ್ ಹಾಗೂ ಗಣ್ಯರು ಸನ್ಮಾನಿಸಿ ಗೌರವಿಸಿದರು.

ಐದನೇ ಸೆಮಿಸ್ಟರ್ ವಿದ್ಯಾರ್ಥಿನಿ ರಶ್ಮಿ ಸ್ವಾಗತಿಸಿದರು. ಆಯಿಷಾ ಅಫಾಫ್ ವಂದಿಸಿದರು. ಸಾನಿಯಾ ಕಾರ್ಯಕ್ರಮ ನಿರೂಪಿಸಿದರು.

ಕಾಲೇಜಿನ ಬೋಧಕ ವರ್ಗದವರು ಹಾಗೂ ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ವಿದ್ಯಾರ್ಥಿನಿಯರ ವೈಜ್ಞಾನಿಕ ಜ್ಞಾನ ವೃದ್ಧಿಸುವುದು ಹಾಗೂ ಸ್ಪೆಕ್ಟ್ರೋಸ್ಕೋಪಿಕ್ ತಂತ್ರಗಳ ಪ್ರಾಯೋಗಿಕ ಅನ್ವಯಗಳ ಕುರಿತು ಅರಿವು ಮೂಡಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿತ್ತು.

ಅಂಡರ್-14 ಅಂತರ ಜಿಲ್ಲಾ ಕ್ರಿಕೆಟ್ ಪಂದ್ಯಾವಳಿ: ವಿಜಯಪುರ, ಕೊಪ್ಪಳ ತಂಡಗಳಿಗೆ ಜಯ



ರಾಯಚೂರು: ನಗರದ ಎಲ್ ವಿಡಿ ಕಾಲೇಜು ಹಾಗೂ ಕೆಎಸ್‌ಸಿಎ ಕ್ರಿಕೆಟ್ ಮೈದಾನಗಳಲ್ಲಿ ಆರಂಭವಾದ 14 ವರ್ಷದೊಳಗಿನವರ (ಅಂಡರ್-14) ಅಂತರ ಜಿಲ್ಲಾ ಕ್ರಿಕೆಟ್ ಪಂದ್ಯಾವಳಿಯ 'ಬಿ' ಗುಂಪಿನ ಪಂದ್ಯಗಳಲ್ಲಿ ವಿಜಯಪುರ ಹಾಗೂ ಕೊಪ್ಪಳ ತಂಡಗಳು ಗೆಲುವು ಸಾಧಿಸಿವೆ.

ಎಲ್‌ವಿಡಿ ಕಾಲೇಜು ಮೈದಾನದಲ್ಲಿ ವಿಜಯಪುರ ಮತ್ತು ಕನ್ವೀನರ್ ಇಲೆವೆನ್ ತಂಡಗಳ ನಡುವೆ ಹಾಗೂ ಕೆಎಸ್‌ಸಿಎ ಮೈದಾನದಲ್ಲಿ ಕೊಪ್ಪಳ ಮತ್ತು ಕಲಬುರಗಿ ತಂಡಗಳ ನಡುವೆ ಪಂದ್ಯಗಳು ನಡೆದವು.

ಪಂದ್ಯಾವಳಿಗೆ ತಾರಾನಾಥ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಪವನ್ ಸುಖನಿ, ರಾಯಚೂರು ವಲಯದ ಮಾಜಿ ಕನ್ವೀನರ್ ಸೇತುಮಾಧವ್, ಜಿಲ್ಲಾ ಸಂಯೋಜಕ ಎನ್. ವಿನಾಯಕ್ ರಾವ್ ಚಾಲನೆ ನೀಡಿದರು.

ಎಲ್‌ವಿಡಿ ಕಾಲೇಜು ಮೈದಾನದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ಕನ್ವೀನರ್ ಇಲೆವೆನ್ ತಂಡವು 30.5 ಓವರ್‌ಗಳಲ್ಲಿ ಎಲ್ಲ ವಿಕೆಟ್ ಕಳೆದುಕೊಂಡು 109 ರನ್ ಗಳಿಸಿತು. ತಂಡದ ಪರ ಅಕ್ಷಯ್ ಕುಮಾರ್ 36 ಎಸೆತಗಳಲ್ಲಿ 30 ರನ್ ಹಾಗೂ ದ್ವಿಜ್ ಸುಖನಿ 17 ಎಸೆತಗಳಲ್ಲಿ 12 ರನ್ ಗಳಿಸಿದರು.

ವಿಜಯಪುರ ತಂಡದ ಋಷಿಕೇಶ 8 ಓವರ್‌ಗಳಲ್ಲಿ 29 ರನ್ ನೀಡಿ 3 ವಿಕೆಟ್ ಪಡೆದು ಗಮನ ಸೆಳೆದರು.

110 ರನ್‌ಗಳ ಗೆಲುವಿನ ಗುರಿ ಬೆನ್ನಟ್ಟಿದ ವಿಜಯಪುರ ತಂಡದ ಪವನ್‌ದೀಪ್ 34 ಎಸೆತಗಳಲ್ಲಿ 74 ರನ್ ಸಿಡಿಸಿ ಅಮೋಘ ಬ್ಯಾಟಿಂಗ್ ಪ್ರದರ್ಶಿಸಿದರು. ಸಾಮಜಿ ವಿಷ್ಣು 31 ಎಸೆತಗಳಲ್ಲಿ 28 ರನ್ ಗಳಿಸಿ ತಂಡದ ಗೆಲುವಿಗೆ ನೆರವಾದರು.

ಕೆಎಸ್‌ಸಿಎ ಮೈದಾನದಲ್ಲಿ ನಡೆದ ಮತ್ತೊಂದು ಪಂದ್ಯದಲ್ಲಿ ಕೊಪ್ಪಳ ತಂಡವು ಕಲಬುರಗಿ ವಿರುದ್ಧ 28 ರನ್‌ಗಳ ಜಯ ಸಾಧಿಸಿತು.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಕೊಪ್ಪಳ ತಂಡವು 44 ಓವರ್‌ಗಳಲ್ಲಿ ಎಲ್ಲ ವಿಕೆಟ್ ಕಳೆದುಕೊಂಡು 188 ರನ್ ಗಳಿಸಿತು. ತಂಡದ ಪರ ವಿವೇಕಾನಂದ 58 ಎಸೆತಗಳಲ್ಲಿ 55 ರನ್ ಹಾಗೂ ರಾಮಸೂರ್ಯ ನಾಯಕ 67 ಎಸೆತಗಳಲ್ಲಿ 54 ರನ್ ಗಳಿಸಿ ಉತ್ತಮ ಪ್ರದರ್ಶನ ನೀಡಿದರು.

189 ರನ್‌ಗಳ ಗುರಿ ಬೆನ್ನಟ್ಟಿದ ಕಲಬುರಗಿ ತಂಡವು 31.5 ಓವರ್‌ಗಳಲ್ಲಿ 160 ರನ್‌ಗಳಿಗೆ ಆಲೌಟ್ ಆಯಿತು. ಕಲಬುರಗಿ ಪರ ದಿಗಂತ್ ವಿ. 67 ಎಸೆತಗಳಲ್ಲಿ 54 ರನ್ ಹಾಗೂ ಸುನಿಲ್ 53 ಎಸೆತಗಳಲ್ಲಿ 36 ರನ್ ಗಳಿಸಿದರು.

ಕೊಪ್ಪಳ ತಂಡದ ಸೌರಭ್ ಮತ್ತು ಸಲ್ಮಾನ್ ತಲಾ ಮೂರು ವಿಕೆಟ್ ಪಡೆದು ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು.

ಉದ್ಘಾಟನಾ ಸಂದರ್ಭದಲ್ಲಿ ಉದ್ಯಮಿಗಳಾದ ಪ್ರಶಾಂತ್, ಅನಿಲ್, ಆಯ್ಕೆಗಾರರಾದ ಸಚಿನ್, ರಾಹುಲ್, ಹರಿಪ್ರಸಾದ್, ಪಂದ್ಯಾಧಿಕಾರಿಗಳಾದ ವಿಜಯ್ ಕುಮಾರ್ ಡಿ., ಸಿದ್ರಾಮ್, ಸಂಜಯ್ ಸೇರಿದಂತೆ ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದರು. ರವಿರಾಜ್ ಬಿ.ಆರ್. ಕಾರ್ಯಕ್ರಮ ನಿರೂಪಿಸಿದರು.

ಮಾತೃಭಾಷೆಯ ಆರಾಧಕ, ಹೈಕು ಹರಿಕಾರ ವೀರಹನುಮಾನ ಹಿರಿಯ ಸಾಹಿತಿಗಳು



ಸಾಹಿತ್ಯವೆಂದರೆ ಅಕ್ಷರಗಳ ಒಡವೆಯಷ್ಟೇ ಅಲ್ಲ,
ಅದು ಸಮಾಜದ ನೋವು ನಲಿವುಗಳಿಗೆ ಮಿಡಿಯುತ್ತಾ,
ಮನುಷ್ಯತ್ವದ ಬೇರುಗಳನ್ನು ಗಟ್ಟಿಗೊಳಿಸುವ ಚೈತನ್ಯದ ಕಿಡಿ.

ಕಲ್ಯಾಣ ಕರ್ನಾಟಕದ ಬಿಸಿಲು–ಬೆವರಿಗಷ್ಟೇ ಅಲ್ಲದೆ, ತನ್ನ ಸಾಹಿತ್ಯಿಕ ಪರಿಮಳದಿಂದ ನಾಡಿನಾದ್ಯಂತ ಪಸರಿಸಿರುವ ರಾಯಚೂರಿನ ಹಿರಿಯ ಸಾಹಿತಿ ಹಾಗೂ ಬಹುಮುಖ ಪ್ರತಿಭೆಯ ವೀರಹನುಮಾನ ಅವರು ಕನ್ನಡ ನಾಡು–ನುಡಿಗೆ ಸಲ್ಲಿಸಿರುವ ಸೇವೆ ಅಕ್ಷರಶಃ ಅನನ್ಯ. ಶಿಕ್ಷಣ ಇಲಾಖೆಯಲ್ಲಿ ಡಯಟ್ ಅಧೀಕ್ಷಕರಾಗಿ 2015ರಲ್ಲಿ ಅಧಿಕೃತ ನಿವೃತ್ತಿ ಪಡೆದರೂ, ಅವರ ಅಕ್ಷರಸಾಧನೆಗೆ ಮತ್ತು ಸಮಾಜಮುಖಿ ತುಡಿತಕ್ಕೆ ಎಂದಿಗೂ ವಿರಾಮವಿರಲಿಲ್ಲ. ಸಾಕ್ಷರತಾ ಆಂದೋಲನದ ಪ್ರವರ್ತಕರಾಗಿ, ಪಠ್ಯಪುಸ್ತಕ ರಚನಾ ಸಮಿತಿಯ ಮಾರ್ಗದರ್ಶಕರಾಗಿ ಅವರು ಶಿಕ್ಷಣ ಕ್ಷೇತ್ರಕ್ಕೆ ಒದಗಿಸಿದ ಕೊಡುಗೆ ತಳಪಾಯದಂತಿದೆ.

ಕನ್ನಡ ಸಾಹಿತ್ಯ ಲೋಕದಲ್ಲಿ ಜಪಾನಿ ಮೂಲದ 'ಹೈಕು' ಕಾವ್ಯ ಪ್ರಕಾರವನ್ನು ಆಳವಾಗಿ ಬೇರೂರಿಸಿ, ಅದನ್ನು ಜನಪ್ರಿಯಗೊಳಿಸಿದ ಕೀರ್ತಿ ವೀರಹನುಮಾನ ಅವರಿಗೆ ಸಲ್ಲುತ್ತದೆ. 'ಮಾನವನ ಇತಿಹಾಸ ಮತ್ತು ಪರಂಪರೆ', 'ಒಂದು ಹಳ್ಳಿಯ ಕಥೆ', 'ಮೂಡಲದನಿ', 'ಆತ್ಮಗರ್ಭ', 'ಸತ್ಯಕ್ಕೆ ಇದಿಗೇ ಗ್ರಹಣ', 'ವಿಜಯೇಂದ್ರ ತೀರ್ಥ', 'ಚೆಲುವರಿಂಗು', 'ಸಿರಿದಂತ' ಮುಂತಾದ ಸುಮಾರು ಐವತ್ತಕ್ಕೂ ಹೆಚ್ಚು ಗ್ರಂಥಗಳನ್ನು ಕನ್ನಡ ಸಾರಸ್ವತ ಲೋಕಕ್ಕೆ ಸಮರ್ಪಿಸಿರುವ ಇವರ ಸೃಜನಶೀಲತೆ ವಿಸ್ಮಯಕಾರಿಯಾಗಿದೆ. ಕವನ, ಕಥೆ, ವೈಚಾರಿಕ ಲೇಖನ ಹಾಗೂ ಹೈಕುಗಳ ಹೂರಣದಲ್ಲಿ ಮೈತಳೆದ ಇವರ ಬರಹಗಳು, ಪ್ರಾದೇಶಿಕ ಅಸಮಾನತೆಯ ವಿರುದ್ಧ ದನಿಗತ್ತಿದ ಪ್ರಖರ ವೈಚಾರಿಕತೆಯ ಪ್ರತೀಕವಾಗಿವೆ.

ಅಕ್ಷರದ ಒಡನಾಟದಷ್ಟೇ ರಂಗಭೂಮಿ ಹಾಗೂ ಸಾಂಸ್ಕೃತಿಕ ಲೋಕದಲ್ಲೂ ತಮ್ಮ ಪ್ರಭಾವ ಬೀರಿದವರು ಇವರು. ರಾಯಚೂರಿನ ಐತಿಹಾಸಿಕ ಕೋಟೆಗಳ ಸಂರಕ್ಷಣೆಗೆ 'ಕೋಟೆ ಅಧ್ಯಯನ ಸಮಿತಿ'ಯನ್ನು ಕಟ್ಟಿ, ಇತಿಹಾಸದ ಕುರುಹುಗಳನ್ನು ಮರುಜೀವಗೊಳಿಸುವಲ್ಲಿ ಶ್ರಮಿಸಿದ್ದಾರೆ. ವಿದ್ಯಾರ್ಥಿ ದೆಸೆಯಿಂದಲೇ (ಎಸ್‌ಎಫ್‌ಐ ಮತ್ತು ಡಿವೈಎಫ್‌ಐ) ಜನಪರ ಹೋರಾಟಗಳಲ್ಲಿ ತೊಡಗಿಸಿಕೊಂಡು, ಸಮುದಾಯ ಸಂಘಟನೆ ಹಾಗೂ ನಾಟಕಗಳ ಮೂಲಕ ಸಾಮಾಜಿಕ ಜಾಗೃತಿ ಮೂಡಿಸಿದ ಇವರ ನಂಟು ದೂರದರ್ಶನದ ವರೆಗೂ ವಿಸ್ತರಿಸಿದೆ.

ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ, ಕನ್ನಡ ರತ್ನ, ಮಹಾಂತಪ್ಪಯ್ಯ ಪ್ರಶಸ್ತಿ, ವಿಜಯೇಂದ್ರ ಅನುಗ್ರಹ ಪ್ರಶಸ್ತಿ ಹಾಗೂ ಕಸಾಪ ದತ್ತಿ ಪ್ರಶಸ್ತಿಗಳು ಇವರ ಮುಡಿಗೇರಿವೆ. ನಿತ್ಯ ಬದುಕಿನಲ್ಲಿ ಕನ್ನಡದ ಘನತೆಯನ್ನು ಎತ್ತಿಹಿಡಿಯುವ ಮಹಾಪಣ ತೊಟ್ಟಿರುವ ಇವರಿಗೆ ಒಲಿದುಬಂದಿರುವ ರಾಜ್ಯಮಟ್ಟದ 'ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ' ಸಮಸ್ತ ರಾಯಚೂರು ಸೀಮೆಗೆ ಸಂದ ಹೆಮ್ಮೆಯ ಮಕುಟವಾಗಿದೆ.

ತಾರಾನಾಥ ಶಿಕ್ಷಣ ಸಂಸ್ಥೆಯ ಎಲ್.ವಿ.ಡಿ. ಮಹಾವಿದ್ಯಾಲಯದ ಆಡಳಿತ ಮಂಡಳಿಯ ಕಾರ್ಯದರ್ಶಿಗಳಾಗಿ ಹಾಗೂ ಹಿರಿಯ ಸಾಹಿತಿಗಳಾಗಿ ಸಂಸ್ಥೆಗೆ ಮತ್ತು ಸಮಾಜಕ್ಕೆ ಮಾರ್ಗದರ್ಶನ ನೀಡುತ್ತಿರುವ ತಂದೆ ಸಮಾನರಾದ ವೀರಹನುಮಾನ ಸರ್ ಅವರಿಗೆ ತಾರಾನಾಥ ಶಿಕ್ಷಣ ಸಂಸ್ಥೆಯ ವತಿಯಿಂದ 12 ನವೆಂಬರ್ 2026 ರಂದು ಎಲ್ ವಿ ಡಿ ಮಹಾವಿದ್ಯಾಲಯ ಸಭಾಂಗಣದಲ್ಲಿ ಗೌರವಿಸುತ್ತಿರುವುದು ಹೆಮ್ಮೆಯ ವಿಷಯ. ಇವರ ಲೇಖನಿಯಿಂದ ಇನ್ನಷ್ಟು ಸಾಹಿತ್ಯಿಕ ಕೃತಿಗಳು ಮೂಡಿಬರಲಿ, ಇವರ ನಿಸ್ವಾರ್ಥ ಸೇವೆ ಸದಾ ಯುವಪೀಳಿಗೆಗೆ ದಾರಿದೀಪವಾಗಲಿ ಎಂದು ಮನಪೂರ್ವಕವಾಗಿ ಹಾರೈಸುತ್ತೇನೆ.



-ಡಾ.ಅರುಣಾ ಹಿರೇಮಠ
ಉಪನ್ಯಾಸಕರು, ಎಲ್ ವಿ ಡಿ ಮಹಾವಿದ್ಯಾಲಯ ರಾಯಚೂರು.

ಹಾಲು, ಮೊಸರು, ತುಪ್ಪ ಹಾಗೂ ಬಸ್ ದರ ಏರಿಕೆ ಖಂಡಿಸಿ ಸಿಪಿಐಎಂ ಪ್ರತಿಭಟನೆ



ರಾಯಚೂರು, ನ.11: ಹಾಲು, ಮೊಸರು, ತುಪ್ಪ ಹಾಗೂ ಸಾರಿಗೆ ಬಸ್‌ಗಳ ಪ್ರಯಾಣ ದರ ಹೆಚ್ಚಳದಿಂದ ಜನಸಾಮಾನ್ಯರ ಜೀವನ ನಿರ್ವಹಣೆ ದುಸ್ತರವಾಗಿದ್ದು, ರಾಜ್ಯ ಸರ್ಕಾರ ಕೂಡಲೇ ಬೆಲೆ ಏರಿಕೆ ನಿರ್ಧಾರವನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿ ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ಸಿಪಿಐಎಂ ಜಿಲ್ಲಾ ಸಮಿತಿ ವತಿಯಿಂದ ಬುಧವಾರ ಪ್ರತಿಭಟನೆ ನಡೆಸಲಾಯಿತು.

ನಗರದ ಟಿಪ್ಪು ಸುಲ್ತಾನ್ ಗಾರ್ಡನ್‌ನಲ್ಲಿ ಜಮಾಯಿಸಿದ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು, ಅಗತ್ಯ ವಸ್ತುಗಳ ಬೆಲೆ ಏರಿಕೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ಜನಸಾಮಾನ್ಯರ ಹಿತದೃಷ್ಟಿಯಿಂದ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಮುಖಂಡರು, ರಾಜ್ಯ ಸರ್ಕಾರ ಹಾಲು ಮತ್ತು ಮೊಸರಿನ ಬೆಲೆಯನ್ನು ಪ್ರತಿ ಲೀಟರ್‌ಗೆ ₹8 ಹಾಗೂ ತುಪ್ಪದ ಬೆಲೆಯನ್ನು ಪ್ರತಿ ಕೆ.ಜಿ.ಗೆ ₹104 ಹೆಚ್ಚಿಸಿದೆ. ಇದರೊಂದಿಗೆ ಬಸ್ ಪ್ರಯಾಣ ದರವನ್ನೂ ಏರಿಸಿರುವುದು ಬಡವರು, ಮಧ್ಯಮ ವರ್ಗದ ಕುಟುಂಬಗಳು ಹಾಗೂ ದಿನಗೂಲಿ ಕಾರ್ಮಿಕರ ಆರ್ಥಿಕ ಪರಿಸ್ಥಿತಿಯ ಮೇಲೆ ಗಂಭೀರ ಪರಿಣಾಮ ಬೀರಿದೆ ಎಂದು ಆರೋಪಿಸಿದರು.

ಜಿಲ್ಲೆಯಲ್ಲಿ ಬರಗಾಲದ ಪರಿಣಾಮ ಕೃಷಿ ಮತ್ತು ಕೂಲಿ ಕೆಲಸಗಳನ್ನು ಅವಲಂಬಿಸಿರುವ ಅನೇಕ ಕುಟುಂಬಗಳು ಸಂಕಷ್ಟ ಎದುರಿಸುತ್ತಿವೆ. ಉದ್ಯೋಗಾವಕಾಶಗಳ ಕೊರತೆ ಹಾಗೂ ಆದಾಯ ಕುಸಿತದಿಂದ ಜೀವನ ಸಾಗಿಸುವುದೇ ಸವಾಲಾಗಿರುವ ಸಂದರ್ಭದಲ್ಲಿ ಅಗತ್ಯ ವಸ್ತುಗಳ ಬೆಲೆ ಹೆಚ್ಚಿಸಿರುವುದು ಜನರ ಸಂಕಷ್ಟವನ್ನು ಮತ್ತಷ್ಟು ಉಲ್ಬಣಗೊಳಿಸಿದೆ ಎಂದು ದೂರಿದರು.

ಹಾಲು ಉತ್ಪಾದಕರಿಗೆ ಆರ್ಥಿಕ ನೆರವು ನೀಡುವ ನೆಪದಲ್ಲಿ ಗ್ರಾಹಕರ ಮೇಲೆ ಹೆಚ್ಚುವರಿ ಹೊರೆ ವಿಧಿಸುವುದು ಸಮಂಜಸವಲ್ಲ. ಹೈನುಗಾರಿಕೆಯನ್ನು ಅವಲಂಬಿಸಿರುವ ರೈತರಿಗೆ ಪ್ರತಿ ಲೀಟರ್ ಹಾಲಿಗೆ ₹8 ಸಹಾಯಧನ ನೀಡಬೇಕು. ಪಶು ಆಹಾರ ಸೇರಿದಂತೆ ಹಾಲು ಉತ್ಪಾದನೆಯ ವೆಚ್ಚ ತಗ್ಗಿಸಲು ವಿಶೇಷ ಕ್ರಮಗಳನ್ನು ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಹಾಲು ಒಕ್ಕೂಟಗಳು ಹಾಗೂ ಡೈರಿಗಳಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ ಮತ್ತು ಹಣಕಾಸಿನ ಸೋರಿಕೆಯನ್ನು ನಿಯಂತ್ರಿಸುವ ಮೂಲಕ ಉತ್ಪಾದಕರ ಹಿತ ಕಾಪಾಡಬೇಕು. ಗ್ರಾಹಕರು ಮತ್ತು ಹಾಲು ಉತ್ಪಾದಕರು ಇಬ್ಬರಿಗೂ ಅನುಕೂಲವಾಗುವಂತಹ ನೀತಿಗಳನ್ನು ಸರ್ಕಾರ ರೂಪಿಸಬೇಕೆಂದು ಆಗ್ರಹಿಸಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಅಗತ್ಯ ವಸ್ತುಗಳ ಬೆಲೆ ನಿಯಂತ್ರಿಸುವಲ್ಲಿ ನಿರೀಕ್ಷಿತ ಕ್ರಮ ಕೈಗೊಂಡಿಲ್ಲ. ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ಸೇರಿದಂತೆ ದಿನನಿತ್ಯ ಬಳಕೆಯ ವಸ್ತುಗಳ ದುಬಾರಿ ದರದಿಂದ ಸಾಮಾನ್ಯ ಕುಟುಂಬಗಳ ಮಾಸಿಕ ವೆಚ್ಚ ಹೆಚ್ಚುತ್ತಿದೆ. ಕಾಳಸಂತೆ ವ್ಯಾಪಾರಕ್ಕೆ ಕಡಿವಾಣ ಹಾಕಿ, ಬೆಲೆ ನಿಯಂತ್ರಣಕ್ಕೆ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಬರಪೀಡಿತ ಪ್ರದೇಶಗಳ ಜನರಿಗೆ ತುರ್ತು ಪರಿಹಾರ ಒದಗಿಸುವುದರ ಜೊತೆಗೆ ಹಾಲು, ಮೊಸರು ಹಾಗೂ ಬಸ್ ಪ್ರಯಾಣ ದರ ಹೆಚ್ಚಳವನ್ನು ತಕ್ಷಣ ರದ್ದುಗೊಳಿಸಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಸಿಪಿಐಎಂ ಜಿಲ್ಲಾ ಕಾರ್ಯದರ್ಶಿ ಕೆ.ಜಿ. ವೀರೇಶ, ತಾಲೂಕು ಕಾರ್ಯದರ್ಶಿ ಎಚ್. ಪದ್ಮಾ, ಡಿ.ಎಸ್. ಶರಣಬಸವ, ಕೆ. ಮಲ್ಲೇಶಪ್ಪ, ಬಸವಂತರಾಯ ಗೌಡ, ನರಸಣ್ಣ ನಾಯಕ, ಹನುಮಂತ ಮಡಲಗುಂಡಾ, ಗೋಕಾರಮ್ಮ, ನಿರ್ಮಲ, ನರಸಮ್ಮ, ಸುಜಾತ, ನರಸಿಂಹಲು, ಮಾರೆಪ್ಪ, ಮಹಾದೇವಿ ಸೇರಿದಂತೆ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ವೀರವನಿತೆ ಒನಕೆ ಓಬವ್ವ ಜಯಂತಿ ಆಚರಣೆ: ಧೈರ್ಯ, ಸಾಹಸ ಮೈಗೂಡಿಸಿಕೊಳ್ಳಲು ತಹಶೀಲ್ದಾರ್ ಭೀಮರಾಯ ಕರೆ



ಮಾನ್ವಿ: ನಾಡಿನ ಇತಿಹಾಸದಲ್ಲಿ ಅಪ್ರತಿಮ ಧೈರ್ಯ, ಸಾಹಸ ಮತ್ತು ಶೌರ್ಯದಿಂದ ಗುರುತಿಸಿಕೊಂಡಿರುವ ವೀರವನಿತೆ ಒನಕೆ ಓಬವ್ವ ಅವರ ಆದರ್ಶಗಳನ್ನು ಪ್ರತಿಯೊಬ್ಬ ಮಹಿಳೆಯೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಹೇಳಿದರು.

ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ತಾಲೂಕು ಆಡಳಿತದ ವತಿಯಿಂದ ಹಮ್ಮಿಕೊಂಡಿದ್ದ ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ಓಬವ್ವ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

18ನೇ ಶತಮಾನದಲ್ಲಿ ಚಿತ್ರದುರ್ಗದ ಕೋಟೆಯ ಪಾಳೆಗಾರರಾಗಿದ್ದ ಮದಕರಿ ನಾಯಕನ ಆಳ್ವಿಕೆಯಲ್ಲಿ ಕೋಟೆಯ ಕಾವಲುಗಾರ ಕಹಳೆ ಮದ್ದಹನುಮಪ್ಪ ಅವರ ಪತ್ನಿಯಾಗಿದ್ದ ಒನಕೆ ಓಬವ್ವ, ತಮ್ಮ ಅಪ್ರತಿಮ ಸಾಹಸದಿಂದ ಇತಿಹಾಸದಲ್ಲಿ ಶಾಶ್ವತ ಸ್ಥಾನ ಪಡೆದಿದ್ದಾರೆ ಎಂದು ತಿಳಿಸಿದರು.

ಹೈದರಾಲಿಯ ಸೈನಿಕರು ಚಿತ್ರದುರ್ಗದ ಕೋಟೆಯ ಕಿಂಡಿಯ ಮೂಲಕ ಒಳನುಗ್ಗಲು ಪ್ರಯತ್ನಿಸುತ್ತಿರುವುದನ್ನು ಗಮನಿಸಿದ ಓಬವ್ವ, ಯಾವುದೇ ಯುದ್ಧ ತರಬೇತಿ ಇಲ್ಲದಿದ್ದರೂ ಸಮಯಪ್ರಜ್ಞೆ ಮತ್ತು ಧೈರ್ಯದಿಂದ ಒನಕೆಯನ್ನೇ ಆಯುಧವನ್ನಾಗಿ ಬಳಸಿಕೊಂಡು ಶತ್ರು ಸೈನಿಕರನ್ನು ಎದುರಿಸಿದರು. ತಮ್ಮ ಪ್ರಾಣವನ್ನೂ ಲೆಕ್ಕಿಸದೆ ಕೋಟೆಯ ರಕ್ಷಣೆಗೆ ಮುಂದಾದ ಅವರ ಸಾಹಸವು ನಾಡಿನ ಇತಿಹಾಸದಲ್ಲಿ ಅಚ್ಚಳಿಯದೆ ಉಳಿದಿದೆ ಎಂದರು.

ಒನಕೆ ಓಬವ್ವ ಅವರ ಶೌರ್ಯವು ಮಹಿಳೆಯರ ಆತ್ಮವಿಶ್ವಾಸ, ಸ್ವಾಭಿಮಾನ ಹಾಗೂ ಸಾಹಸಪ್ರವೃತ್ತಿಗೆ ಉತ್ತಮ ಉದಾಹರಣೆಯಾಗಿದೆ. ಸಂಕಷ್ಟದ ಸಂದರ್ಭಗಳಲ್ಲಿ ಎದೆಗುಂದದೆ ಧೈರ್ಯದಿಂದ ಸಮಸ್ಯೆಗಳನ್ನುಎದುರಿಸುವಮನೋಭಾವವನ್ನು ಪ್ರತಿಯೊಬ್ಬರೂ ಬೆಳೆಸಿಕೊಳ್ಳಬೇಕು. ವಿಶೇಷವಾಗಿ ಇಂದಿನ ಯುವತಿಯರು ಓಬವ್ವ ಅವರ ಜೀವನಾದರ್ಶಗಳಿಂದ ಸ್ಫೂರ್ತಿ ಪಡೆದು ಶಿಕ್ಷಣ, ಸಾಮಾಜಿಕ ಸೇವೆ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿಯೂ ಮುನ್ನಡೆಯಬೇಕು ಎಂದು ಕರೆ ನೀಡಿದರು.

ನಾಡಿನ ವೀರವನಿತೆಯರ ಸಾಲಿನಲ್ಲಿ ಒನಕೆ ಓಬವ್ವ ಅವರಿಗೆ ವಿಶಿಷ್ಟ ಸ್ಥಾನವಿದ್ದು, ಅವರ ತ್ಯಾಗ, ದೇಶಪ್ರೇಮ ಮತ್ತು ಸಾಹಸವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಕಚೇರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಭಾಗವಹಿಸಿ ಒನಕೆ ಓಬವ್ವ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ದೀಪಾವಳಿ ಪಾಡ್ಯ ಪ್ರಯುಕ್ತ ನೀರಮಾನ್ವಿ ಶ್ರೀ ರೇಣುಕಾ ಯಲ್ಲಮ್ಮದೇವಿ ದೇವಸ್ಥಾನದಲ್ಲಿ ಗೋ ಪೂಜೆ ನೆರವೇರಿಸಿದ ಶಾಸಕ ಹಂಪಯ್ಯ ನಾಯಕ



ಮಾನ್ವಿ: ತಾಲೂಕಿನ ನೀರಮಾನ್ವಿ ಗ್ರಾಮದ ಶ್ರೀ ರೇಣುಕಾ ಯಲ್ಲಮ್ಮದೇವಿ ದೇವಸ್ಥಾನದಲ್ಲಿ ದೀಪಾವಳಿ ಪಾಡ್ಯ ಹಬ್ಬದ ಅಂಗವಾಗಿ ಆಯೋಜಿಸಿದ್ದ ಕಿರು ಜಾತ್ರಾ ಮಹೋತ್ಸವಕ್ಕೆ ಶಾಸಕ ಜಿ. ಹಂಪಯ್ಯ ನಾಯಕ ಅವರು ಗೋ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿದರು.

ಮಂಗಳವಾರ ರಾಜ್ಯ ಸರ್ಕಾರದ ಧಾರ್ಮಿಕ ದತ್ತಿ ಇಲಾಖೆಗೆ ಒಳಪಟ್ಟಿರುವ ಶ್ರೀ ರೇಣುಕಾ ಯಲ್ಲಮ್ಮದೇವಿ ದೇವಸ್ಥಾನದ ಆವರಣದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗವಹಿಸಿದ ಶಾಸಕರು, ಗೋವಿಗೆ ಪೂಜೆ ಸಲ್ಲಿಸಿ, ಬಳಿಕ ದೇವಸ್ಥಾನದಲ್ಲಿ ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಜಿ. ಹಂಪಯ್ಯ ನಾಯಕ, ದೀಪಾವಳಿ ಹಬ್ಬವು ಬೆಳಕು, ಸಮೃದ್ಧಿ ಹಾಗೂ ಸಂತೋಷದ ಸಂಕೇತವಾಗಿದೆ. ಹಬ್ಬದ ಅಂಗವಾಗಿ ಗೋ ಪೂಜೆ ನೆರವೇರಿಸುವುದು ನಮ್ಮ ಸಂಸ್ಕೃತಿ ಮತ್ತು ಧಾರ್ಮಿಕ ಪರಂಪರೆಯ ಪ್ರಮುಖ ಭಾಗವಾಗಿದೆ ಎಂದು ಹೇಳಿದರು.

ಶ್ರೀ ರೇಣುಕಾ ಯಲ್ಲಮ್ಮದೇವಿಯ ಕೃಪೆಯಿಂದ ನಾಡಿನಲ್ಲಿ ಉತ್ತಮ ಮಳೆಯಾಗಿ, ರೈತರು ಬೆಳೆದ ಬೆಳೆಗಳಿಗೆ ಉತ್ತಮ ಇಳುವರಿ ದೊರೆಯಲಿ. ಕೃಷಿ ಚಟುವಟಿಕೆಗಳು ಸಮೃದ್ಧಿಯಾಗಿ ನಡೆದು, ರೈತರು ಆರ್ಥಿಕವಾಗಿ ಅಭಿವೃದ್ಧಿ ಹೊಂದುವಂತಾಗಲಿ. ನಾಡಿನ ಜನತೆ ಸುಖ, ಶಾಂತಿ ಮತ್ತು ನೆಮ್ಮದಿಯಿಂದ ಜೀವನ ನಡೆಸುವಂತಾಗಲಿ ಎಂದು ದೇವಿಯಲ್ಲಿ ಪ್ರಾರ್ಥಿಸಿದರು.

ಗ್ರಾಮೀಣ ಭಾಗಗಳಲ್ಲಿ ನಡೆಯುವ ಜಾತ್ರೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ಜನರ ನಡುವಿನ ಪರಸ್ಪರ ಬಾಂಧವ್ಯ, ಸೌಹಾರ್ದತೆ ಮತ್ತು ಒಗ್ಗಟ್ಟನ್ನು ಬಲಪಡಿಸುತ್ತವೆ. ಇಂತಹ ಆಚರಣೆಗಳು ನಮ್ಮ ನಾಡಿನ ಸಂಸ್ಕೃತಿ, ಸಂಪ್ರದಾಯ ಹಾಗೂ ಧಾರ್ಮಿಕ ನಂಬಿಕೆಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ದೀಪಾವಳಿ ಪಾಡ್ಯದ ಅಂಗವಾಗಿ ದೇವಸ್ಥಾನದಲ್ಲಿ ಶ್ರೀ ರೇಣುಕಾ ಯಲ್ಲಮ್ಮದೇವಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀ ರೇಣುಕಾ ಯಲ್ಲಮ್ಮದೇವಿ ದೇವಸ್ಥಾನದ ಅಧ್ಯಕ್ಷರೂ ಆಗಿರುವ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ, ಕಂದಾಯ ನಿರೀಕ್ಷಕ ಚರಣ್ ಸಿಂಗ್ ಠಾಕೂರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಬ್ದುಲ್ ಗಾಫೂರ್ ಸಾಬ್, ವಕೀಲರಾದ ಬಿ.ಕೆ. ಅಮರೇಶಪ್ಪ, ಸಿದ್ದಲಿಂಗಪ್ಪ, ಗೋಪಾಲ್ ನಾಯಕ ನೀರಮಾನ್ವಿ, ಬೀರಪ್ಪ ಬಲ್ಲಟಗಿ, ಶರಣಬಸವ ನೀರಮಾನ್ವಿ, ರಸೂಲ್ ಕುರೇಶಿ, ಸತ್ತಾರ್ ಬಂಗ್ಲೆವಾಲೆ, ರಂಗನಾಥ ನಾಯಕ, ಮಹಾಂತೇಶ ನಕ್ಕುಂದಿ ಸೇರಿದಂತೆ ಗ್ರಾಮಸ್ಥರು ಹಾಗೂ ಭಕ್ತರು ಉಪಸ್ಥಿತರಿದ್ದರು.

ಯುವಜನತೆ, ಮಹಿಳೆಯರು ಒನಕೆ ಓಬವ್ವ ಅವರ ಸಾಹಸ, ದೇಶಪ್ರೇಮ ಮೈಗೂಡಿಸಿಕೊಳ್ಳಬೇಕು: ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ



ದೇವದುರ್ಗ: ಯುವಜನತೆ ಹಾಗೂ ಮಹಿಳೆಯರು ವೀರವನಿತೆ ಒನಕೆ ಓಬವ್ವ ಅವರ ಅಸಾಧಾರಣ ಸಾಹಸ, ದೇಶಪ್ರೇಮ, ಧೈರ್ಯ ಮತ್ತು ಸ್ವಾಭಿಮಾನದ ಆದರ್ಶಗಳನ್ನು ತಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಾಲೂಕು ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ ಕರೆ ನೀಡಿದರು.

ಪಟ್ಟಣದ ವೀರವನಿತೆ ಒನಕೆ ಓಬವ್ವ ವೃತ್ತದಲ್ಲಿ ತಾಲೂಕು ಆಡಳಿತದ ವತಿಯಿಂದ ಆಯೋಜಿಸಿದ್ದ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದ ಬಳಿಕ ಮಾತನಾಡಿದರು.

ಭಾರತೀಯ ಇತಿಹಾಸದಲ್ಲಿ ಅಪ್ರತಿಮ ಶೌರ್ಯ ಹಾಗೂ ದೇಶಭಕ್ತಿಗೆ ಹೆಸರಾದ ಚಿತ್ರದುರ್ಗದ ಒನಕೆ ಓಬವ್ವ ಅವರ ಸಾಹಸಗಾಥೆ ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕವಾಗಿದೆ. ಸಾಮಾನ್ಯ ಕುಟುಂಬದಲ್ಲಿ ಜನಿಸಿದ ಮಹಿಳೆಯೊಬ್ಬರು ಸಂಕಷ್ಟದ ಸಂದರ್ಭದಲ್ಲಿ ಅಸಾಮಾನ್ಯ ಧೈರ್ಯ ಪ್ರದರ್ಶಿಸಿ ನಾಡಿನ ರಕ್ಷಣೆಗೆ ಮುಂದಾದ ಘಟನೆ ಇತಿಹಾಸದಲ್ಲಿ ಅಚ್ಚಳಿಯದೆ ಉಳಿದಿದೆ ಎಂದು ಹೇಳಿದರು.

ಡಾ. ಬಿ.ಆರ್. ಅಂಬೇಡ್ಕರ್ ಅವರ ನೇತೃತ್ವದಲ್ಲಿ ರಚನೆಯಾದ ಸಂವಿಧಾನವು ಮಹಿಳೆಯರಿಗೆ ಸಮಾನತೆ, ಸ್ವಾತಂತ್ರ್ಯ ಹಾಗೂ ಅವಕಾಶಗಳನ್ನು ಕಲ್ಪಿಸಿಕೊಟ್ಟಿದೆ. ಸಂವಿಧಾನ ನೀಡಿರುವ ಹಕ್ಕುಗಳು ಮತ್ತು ಅವಕಾಶಗಳನ್ನು ಬಳಸಿಕೊಂಡು ಮಹಿಳೆಯರು ಇಂದು ಶಿಕ್ಷಣ, ಆಡಳಿತ, ರಾಜಕೀಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉನ್ನತ ಸ್ಥಾನಗಳನ್ನು ಅಲಂಕರಿಸುತ್ತಿದ್ದಾರೆ. 'ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ' ಎಂಬ ಮಾತಿನಂತೆ ಮಹಿಳೆಯರ ಶಿಕ್ಷಣ ಮತ್ತು ಸಬಲೀಕರಣವು ಸಮಾಜದ ಪ್ರಗತಿಗೆ ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು.

ಚಿತ್ರದುರ್ಗದ ಕೋಟೆಯು ಕೇವಲ ಕಲ್ಲುಗಳಿಂದ ನಿರ್ಮಿತವಾದ ಕೋಟೆಯಲ್ಲ, ಅದು ನಾಡಿನ ಸ್ವಾಭಿಮಾನ ಹಾಗೂ ಶೌರ್ಯದ ಸಂಕೇತವಾಗಿದೆ. ಆ ಕೋಟೆಯ ಕಾವಲುಗಾರ ಮುದ್ದಹನುಮಪ್ಪ ಅವರ ಪತ್ನಿಯಾಗಿದ್ದ ಒನಕೆ ಓಬವ್ವ ಸಾಮಾನ್ಯ ಗೃಹಿಣಿಯಾಗಿದ್ದರೂ, ನಾಡಿಗೆ ಆಪತ್ತು ಎದುರಾದ ಸಂದರ್ಭದಲ್ಲಿ ಅಪ್ರತಿಮ ಸಾಹಸ ಮೆರೆದರು ಎಂದು ಬಣ್ಣಿಸಿದರು.

ಹೈದರಾಲಿಯ ಸೈನಿಕರು ಚಿತ್ರದುರ್ಗದ ಕೋಟೆಯ ರಹಸ್ಯ ಕಿಂಡಿಯ ಮೂಲಕ ಒಳನುಗ್ಗಲು ಪ್ರಯತ್ನಿಸುತ್ತಿದ್ದಾಗ, ನೀರು ತರಲು ತೆರಳಿದ್ದ ಓಬವ್ವ ಇದನ್ನು ಗಮನಿಸಿದರು. ಊಟ ಮಾಡುತ್ತಿದ್ದ ಪತಿಗೆ ತೊಂದರೆ ನೀಡದೆ, ಕೈಯಲ್ಲಿದ್ದ ಒನಕೆಯನ್ನೇ ಆಯುಧವನ್ನಾಗಿ ಮಾಡಿಕೊಂಡು ಕೋಟೆಯೊಳಗೆ ಪ್ರವೇಶಿಸುತ್ತಿದ್ದ ಶತ್ರು ಸೈನಿಕರನ್ನು ಒಬ್ಬೊಬ್ಬರಾಗಿ ಹೊಡೆದುರುಳಿಸಿದರು. ತಮ್ಮ ಪ್ರಾಣವನ್ನೂ ಲೆಕ್ಕಿಸದೆ ನಾಡಿನ ರಕ್ಷಣೆಗೆ ಮುಂದಾದ ಅವರ ಧೈರ್ಯ ಮತ್ತು ಸಮಯಪ್ರಜ್ಞೆ ಇಂದಿನ ಮಹಿಳೆಯರಿಗೆ ಮಾದರಿಯಾಗಿದೆ ಎಂದು ಹೇಳಿದರು.

ಒನಕೆಓಬವ್ವಅವರಸಾಹಸವುಮಹಿಳೆಯರ ಆತ್ಮಬಲ, ಸ್ವಾಭಿಮಾನ ಮತ್ತು ಹೋರಾಟದ ಮನೋಭಾವಕ್ಕೆ ಪ್ರತೀಕವಾಗಿದೆ. ಇಂದಿನ ಯುವಜನತೆ ಅವರ ಜೀವನಚರಿತ್ರೆಯನ್ನು ಅರಿತುಕೊಂಡು ದೇಶಪ್ರೇಮ, ಸಾಮಾಜಿಕ ಜವಾಬ್ದಾರಿ ಹಾಗೂ ಧೈರ್ಯದ ಗುಣಗಳನ್ನು ಬೆಳೆಸಿಕೊಳ್ಳಬೇಕು. ಮಹಿಳೆಯರು ಯಾವುದೇ ಸಂಕಷ್ಟದ ಸಂದರ್ಭದಲ್ಲಿಯೂ ಎದೆಗುಂದದೆ ಆತ್ಮವಿಶ್ವಾಸದಿಂದ ಮುನ್ನಡೆಯಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖಂಡ ಷಣ್ಮುಖ ಹೂಗಾರ ಮಾತನಾಡಿ, ಒನಕೆ ಓಬವ್ವ ಅವರ ಶೌರ್ಯ, ತ್ಯಾಗ ಮತ್ತು ದೇಶಭಕ್ತಿಯ ಆದರ್ಶಗಳನ್ನು ಸ್ಮರಿಸಿದರು. ಇಂತಹ ಮಹನೀಯರ ಜಯಂತಿ ಆಚರಣೆಗಳು ಅವರ ಜೀವನ ಸಂದೇಶವನ್ನು ಮುಂದಿನ ಪೀಳಿಗೆಗೆ ತಲುಪಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ ಹಿರಿಯ ಬೌದ್ಧ ಉಪಾಸಕ ಮಲ್ಲೇಶಪ್ಪ ಹುನಗುಂದಬಾಡ ಅವರು ತ್ರಿಶರಣ ಮತ್ತು ಪಂಚಶೀಲ ಪಠಣ ಮಾಡಿದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣಾಧಿಕಾರಿ ರಾಜಕುಮಾರ ಡೊಣಿ, ಸಿಪಿಐ ಮಂಜುನಾಥ್, ಶಿವರಾಜ ಪೂಜಾರಿ, ಶ್ರೀನಿವಾಸ ನಾಯಕ, ಭೀಮರಾಯ ಮೇಟಿ, ಗಂಗಾಧರ, ರವಿ ಸುರಪೂರ, ದೈಹಿಕ ಶಿಕ್ಷಕ ಬಾಲಪ್ಪ, ಪ್ರವೀಣ, ರಾಘವೇಂದ್ರ, ಭಾಗಪ್ಪ ಹುಜರಾತಿ ಹಾಗೂ ಮುಖಂಡರಾದ ಹನುಮಂತ ಮನ್ನಾಪೂರು, ಮಹಾಂತೇಶ ಭವಾನಿ, ಮಾನಪ್ಪ ಮೇಸ್ತ್ರಿ, ಹುಸೇನಪ್ಪ ಜಾಲಹಳ್ಳಿ, ವಿಶ್ವನಾಥ ಬಲ್ಲಿದವ, ಹನುಮಂತ ದೊರೆ, ಮಲ್ಲಿಕಾರ್ಜುನ ಕೊತ್ತದೊಡ್ಡಿ, ಯಲ್ಲಪ್ಪ ಗಚ್ಚಿನಮನಿ ಜಾಲಹಳ್ಳಿ, ಮಲ್ಲಿಕಾರ್ಜುನ ಬೊಮ್ಮನಾಳ, ಶಿವಕುಮಾರ ಚಲುವಾದಿ ಸೇರಿದಂತೆ ಗಣ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳು ಸಾಹಿತ್ಯಾಸಕ್ತಿ ಬೆಳೆಸಿಕೊಳ್ಳಿ: ಪ್ರೊ. ಬಸವರಾಜ ಪಿ. ಡೋಣೂರು



ರಾಯಚೂರು, ನ.11: ಇಂಗ್ಲಿಷ್ ಕವಿ ವಿಲಿಯಂ ವರ್ಡ್ಸ್‌ವರ್ತ್ ಅವರಿಗೆ ನಿಸರ್ಗವು ಜೀವಂತವಾಗಿ ನಡೆದಾಡುವ ದೇವರಂತೆ ಕಾಣುತ್ತಿತ್ತು. ಅವರು ನಿಸರ್ಗವನ್ನು ಶಿಕ್ಷಕನಂತೆ ಪರಿಗಣಿಸಿದ್ದು, ಪ್ರಕೃತಿಯೊಂದಿಗೆ ಹೆಚ್ಚಿನ ಸಮಯ ಕಳೆಯುತ್ತಿದ್ದರು ಎಂದು ಕಲಬುರಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಹಿರಿಯ ಪ್ರಾಧ್ಯಾಪಕ ಹಾಗೂ ಇಂಗ್ಲಿಷ್ ಮತ್ತು ವಿದೇಶಿ ಭಾಷೆಗಳ ವಿಭಾಗದ ಮುಖ್ಯಸ್ಥ ಪ್ರೊ. ಬಸವರಾಜ ಪಿ. ಡೋಣೂರು ಹೇಳಿದರು.

ನಗರದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಇಂಗ್ಲಿಷ್ ವಿಭಾಗ ಹಾಗೂ ಇಂಗ್ಲಿಷ್ ಲಿಟರರಿ ಕ್ಲಬ್ ವತಿಯಿಂದ ಆಯೋಜಿಸಿದ್ದ ರಿವಿಸಿಟಿಂಗ್ ರೊಮ್ಯಾಂಟಿಸಿಸಂ: ಕಂಟೆಂಪರರಿ ಇಂಟರ್ ಪ್ರಿಟೇಶನ್ ಆಫ್ ಬ್ರಿಟಿಷ್ ರೊಮ್ಯಾಂಟಿಕ್ ಪೊಯಟ್ರಿ ಎಂಬ ವಿಷಯದ ಕುರಿತ ಒಂದು ದಿನದ ವಿಚಾರ ಸಂಕಿರಣವನ್ನು ಇಂಗ್ಲಿಷ್ ಉಪನ್ಯಾಸಕ ಅನಿಲ್ ಅಪ್ರಾಳ್ ಅವರು ಪ್ರಕಟಿಸಿರುವ ಅಕಾಡೆಮಿಕ್ ಇಂಗ್ಲಿಷ್ ಪುಸ್ತಕವನ್ನು ಲೋಕಾರ್ಪಣೆ ಮಾಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ವರ್ಡ್ಸ್‌ವರ್ತ್ ಅವರ ಸಾಹಿತ್ಯ ಕೃತಿಗಳು ಜೀವನದ ವಿವಿಧ ಆಯಾಮಗಳನ್ನು ಪ್ರತಿಬಿಂಬಿಸುತ್ತವೆ. ಕಾವ್ಯವೆಂದರೆ ತೀವ್ರವಾದ ಭಾವನೆಗಳ ಸ್ವಯಂಪ್ರೇರಿತ ಉಕ್ಕುವಿಕೆ. ಅದು ಪ್ರಶಾಂತತೆಯಲ್ಲಿ ನೆನಪಿಸಿಕೊಳ್ಳುವ ಭಾವನೆಗಳಿಂದ ಉದ್ಭವಿಸುತ್ತದೆ ಎಂಬ ವರ್ಡ್ಸ್‌ವರ್ತ್ ಅವರ ಕಾವ್ಯ ವ್ಯಾಖ್ಯಾನವನ್ನು ವಿಶ್ಲೇಷಿಸಿದರು.

ಇಂದು ನಾವು ಮೋಸಗಳಿಂದ ಕೂಡಿದ ಜಗತ್ತಿನಲ್ಲಿ ಬದುಕುತ್ತಿದ್ದೇವೆ. ಪ್ರಕೃತಿಯನ್ನು ಪ್ರೀತಿಸುವುದರಿಂದ ಜೀವನದಲ್ಲಿ ಉತ್ತಮ ಮೌಲ್ಯಗಳನ್ನು ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳು ದುರಂತ ಹಾಗೂ ಹಾಸ್ಯ ನಾಟಕಗಳನ್ನು ವೀಕ್ಷಿಸಬೇಕು. ಸಾಹಿತ್ಯದ ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಿಕೊಂಡು ಜ್ಞಾನವನ್ನು ವೃದ್ಧಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಿವಾನಂದ ಕೆಳಗಿನಮನಿ ಮಾತನಾಡಿ, ಇಂಗ್ಲಿಷ್ ಮತ್ತು ಕನ್ನಡ ಸಾಹಿತ್ಯದ ನಡುವಿನ ಸಂಬಂಧ ಅತ್ಯಂತ ಆಳವಾದದ್ದು ಹಾಗೂ ಪ್ರಭಾವಶಾಲಿಯಾಗಿದೆ. ವರ್ಡ್ಸ್‌ವರ್ತ್, ಕೀಟ್ಸ್, ಶೆಲ್ಲಿ ಮತ್ತು ಬೈರನ್ ಅವರಂತಹ ಕವಿಗಳ ಕಾವ್ಯಶೈಲಿಯಿಂದ ಪ್ರಭಾವಿತರಾಗಿ ಕನ್ನಡದಲ್ಲಿಯೂ ವೈಯಕ್ತಿಕ ಅನುಭವ, ಪ್ರಕೃತಿಪ್ರೀತಿ ಹಾಗೂ ಭಾವನೆಗಳಿಗೆ ಹೆಚ್ಚಿನ ಒತ್ತು ನೀಡುವ ಭಾವಗೀತೆಗಳು ರಚನೆಯಾದವು ಎಂದು ತಿಳಿಸಿದರು.

ಬಿ.ಎಂ. ಶ್ರೀಕಂಠಯ್ಯ ಅವರ ಇಂಗ್ಲಿಷ್ ಗೀತೆಗಳು ಕೃತಿಯು ಇದಕ್ಕೆ ನಾಂದಿಯಾಯಿತು. ಇಂಗ್ಲಿಷ್ ಸಾಹಿತ್ಯದ ಮೂಲಕ ಕನ್ನಡ ಕವಿಗಳಿಗೆ ಪಾಶ್ಚಿಮಾತ್ಯ ಮಾನವತಾವಾದ, ತಾರ್ಕಿಕ ಚಿಂತನೆ ಹಾಗೂ ಸಾಮಾಜಿಕ ಸುಧಾರಣೆಯ ಆಲೋಚನೆಗಳು ಪರಿಚಯವಾದವು ಎಂದು ಹೇಳಿದರು.

ಸಾಹಿತ್ಯದ ಅಧ್ಯಯನ ಅತ್ಯಂತ ಅಗತ್ಯವಾಗಿದೆ. ವಿದ್ಯಾರ್ಥಿಗಳು ಸಾಹಿತ್ಯಕ್ಕೆ ಸಂಬಂಧಿಸಿದ ಪುಸ್ತಕಗಳು, ನಾಟಕಗಳು, ಕಾವ್ಯಗಳು ಹಾಗೂ ಕಾದಂಬರಿಗಳನ್ನು ಹೆಚ್ಚು ಹೆಚ್ಚು ಓದಿ ತಿಳಿದುಕೊಳ್ಳಬೇಕು. ಸಮಾಜ, ಸಂಸ್ಕೃತಿ ಹಾಗೂ ರಾಜಕೀಯ ವ್ಯವಸ್ಥೆಯನ್ನು ಸಾಹಿತಿಗಳು ತಮ್ಮ ಕೃತಿಗಳಲ್ಲಿ ಹೇಗೆ ಚಿತ್ರಿಸಿದ್ದಾರೆ ಎಂಬುದನ್ನು ಸಾಹಿತ್ಯದ ಮೂಲಕ ಅರಿತುಕೊಳ್ಳಬಹುದು. ಸಾಹಿತ್ಯದಲ್ಲಿನ ವೈವಿಧ್ಯತೆ ಮತ್ತು ವೈಶಿಷ್ಟ್ಯಗಳು ನಮ್ಮ ಜೀವನದಲ್ಲಿ ಸಾಕಷ್ಟು ಸಕಾರಾತ್ಮಕ ಬದಲಾವಣೆಗಳನ್ನು ತರಬಲ್ಲವು ಎಂದು ಅಭಿಪ್ರಾಯಪಟ್ಟರು.

ಮೊದಲ ಗೋಷ್ಠಿಯಲ್ಲಿ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ. ಎನ್.ಎಚ್. ಕಲ್ಲೂರು ಅವರು ಪಿ.ಬಿ. ಶೆಲ್ಲಿ ಅವರ ಕುರಿತು ಮಾತನಾಡಿ, ತೀವ್ರವಾದ ಭಾವನೆಗಳು, ಕಲ್ಪನಾವಿಲಾಸ, ಪ್ರಕೃತಿಪ್ರೇಮ ಹಾಗೂ ಅಮೂಲಾಗ್ರ ರಾಜಕೀಯ ಮತ್ತು ಸಾಮಾಜಿಕ ಆದರ್ಶಗಳು ಶೆಲ್ಲಿ ಅವರ ಕಾವ್ಯದ ಪ್ರಮುಖ ಲಕ್ಷಣಗಳಾಗಿವೆ ಎಂದು ತಿಳಿಸಿದರು.

ಶೆಲ್ಲಿ ಅವರ ಓಜಿಮ್ಯಾಂಡಿಯಾಸ್, ಓಡ್ ಟು ದ ವೆಸ್ಟ್ ವಿಂಡ್ ಹಾಗೂ ಟು ಎ ಸ್ಕೈಲಾರ್ಕ್ ಕವಿತೆಗಳನ್ನು ವಿಶ್ಲೇಷಿಸಿ, ಅವುಗಳಲ್ಲಿರುವ ಭಾವನಾತ್ಮಕತೆ, ಪ್ರಕೃತಿಯ ಚಿತ್ರಣ ಹಾಗೂ ಸಾಮಾಜಿಕ ಚಿಂತನೆಗಳನ್ನು ವಿವರಿಸಿದರು.

ಕಲಬುರಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಆಶೀಷ್ ಬೆಲ್ಮಕರ್ ಅವರು ವಿಲಿಯಂ ವರ್ಡ್ಸ್‌ವರ್ತ್ ಅವರ ಕುರಿತು ಮಾತನಾಡಿ, ಪ್ರಕೃತಿಯು ಮನುಷ್ಯನಿಗೆ ಅತ್ಯುತ್ತಮ ಶಿಕ್ಷಕ, ಮಾರ್ಗದರ್ಶಕ ಹಾಗೂ ಸಾಂತ್ವನ ನೀಡುವ ಗೆಳೆಯ ಎಂದು ವರ್ಡ್ಸ್‌ವರ್ತ್ ನಂಬಿದ್ದರು. ಅವರು ಸಾಮಾನ್ಯ ಜನರ ಜೀವನವನ್ನು ತಮ್ಮ ಕಾವ್ಯದ ವಸ್ತುವನ್ನಾಗಿ ಮಾಡಿಕೊಂಡಿದ್ದರು. ಕಾವ್ಯದ ಭಾಷೆಯು ಸಾಮಾನ್ಯ ಜನರಿಗೂ ಅರ್ಥವಾಗುವಂತೆ ಸರಳವಾಗಿರಬೇಕು ಎಂದು ಪ್ರತಿಪಾದಿಸಿದ್ದರು ಎಂದರು.

ವರ್ಡ್ಸ್‌ವರ್ತ್ ತಮ್ಮ ಕಾವ್ಯಗಳಲ್ಲಿ ಮನುಷ್ಯನ ಅಂತರಂಗ ಮತ್ತು ಪ್ರಕೃತಿಯ ನಡುವಿನ ಅವಿನಾಭಾವ ಸಂಬಂಧವನ್ನು ಸುಂದರವಾಗಿ ಚಿತ್ರಿಸಿದ್ದಾರೆ ಎಂದು ವಿವರಿಸಿದರು.

ಎರಡನೇ ಗೋಷ್ಠಿಯಲ್ಲಿ ದಾವಣಗೆರೆ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಎಸ್. ಯಜ್ಞಶ್ರೀ ಅವರು ಜಾನ್ ಕೀಟ್ಸ್ ಅವರ ಕುರಿತು ಮಾತನಾಡಿ, ಭಾವನಾತ್ಮಕ ತೀವ್ರತೆಗೆ ಹೆಸರಾದ ಜಾನ್ ಕೀಟ್ಸ್ ಅವರ ಕಾವ್ಯ ಸಾಹಿತ್ಯವು ಜಗತ್ಪ್ರಸಿದ್ಧವಾಗಿದೆ. ಕೇವಲ 25 ವರ್ಷಗಳ ಅಲ್ಪಾಯುಷ್ಯದಲ್ಲಿಯೇ ಅವರು ಸೃಷ್ಟಿಸಿದ ಸಾಹಿತ್ಯ ಇಂದಿಗೂ ಅಮರವಾಗಿದೆ. ಅವರಿಗೆ ಸೌಂದರ್ಯವೇ ಪರಮ ಸತ್ಯವಾಗಿತ್ತು ಎಂದು ತಿಳಿಸಿದರು.

ಯಾವುದೇ ಒಂದು ವಿಷಯದ ಬಗ್ಗೆ ತಕ್ಷಣ ತೀರ್ಪು ನೀಡದೆ, ಸಂದೇಹಗಳ ನಡುವೆಯೂ ಕಾವ್ಯವನ್ನು ಕಾವ್ಯವಾಗಿಯೇ ಆಸ್ವಾದಿಸುವ ವಿಶಿಷ್ಟ ಗುಣವನ್ನು ಕೀಟ್ಸ್ ಪ್ರತಿಪಾದಿಸಿದ್ದರು. ಅವರ ಕಾವ್ಯಗಳಲ್ಲಿ ದೃಶ್ಯ ಮತ್ತು ಭಾವನೆಗಳ ಶ್ರೀಮಂತಿಕೆ ಕಂಡುಬರುತ್ತದೆ ಎಂದು ವಿಶ್ಲೇಷಿಸಿದರು.

ವೇದಿಕೆಯಲ್ಲಿ ವಿಶ್ವವಿದ್ಯಾಲಯದ ಉಪಕುಲಸಚಿವ ಡಾ. ಕೆ. ವೆಂಕಟೇಶ, ಇಂಗ್ಲಿಷ್ ವಿಭಾಗದ ಮುಖ್ಯಸ್ಥೆ ಪ್ರೊ. ಪಾರ್ವತಿ ಸಿ.ಎಸ್., ವಾಣಿಜ್ಯ ನಿಕಾಯದ ಡೀನ್ ಪ್ರೊ. ಪಿ. ಭಾಸ್ಕರ್ ಉಪಸ್ಥಿತರಿದ್ದರು. ಅನಿಲ್ ಅಪ್ರಾಳ್, ಡಾ. ಮೊಹಮ್ಮದ್ ಆಸೀಫ್ ಹಾಗೂ ಫಾತೀಮಾ ಪರ್ವೀನ್ ಭಾಗವಹಿಸಿದ್ದರು.

ಇಂಗ್ಲಿಷ್ ವಿಭಾಗದ ಸಂಯೋಜಕ ಡಾ. ಆನಂದ ಜೆ. ಯರಗೇರಾ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿದ್ಯಾರ್ಥಿನಿ ಗಂಗಮ್ಮ ಸಂಗಡಿಗರು ಪ್ರಾರ್ಥಿಸಿದರು. ಪ್ರಸಾದ್ ಸ್ವಾಗತಿಸಿದರು. ಬಸಮ್ಮ ಹಾಗೂ ನಾಗರಾಜ್ ಬಿಲ್ಲಾ ಕಾರ್ಯಕ್ರಮ ನಿರೂಪಿಸಿದರು. ಪೂಜಾ, ರಾಜಶೇಖರ್, ಗೌರಮ್ಮ, ಶ್ರೀಹರಿರೆಡ್ಡಿ, ಶ್ರೀದೇವಿ ಹಾಗೂ ಹುಲಿಗೆಮ್ಮ ಅತಿಥಿಗಳನ್ನು ಪರಿಚಯಿಸಿದರು. ಜಯಶ್ರೀ ವಂದಿಸಿದರು.

ವಿವಿಧ ವಿಭಾಗಗಳ ಅತಿಥಿ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಅರಷಿಣಗಿ ಗ್ರಾಮದಲ್ಲಿ ಮೂಲಸೌಕರ್ಯಗಳ ಕೊರತೆ: ಶಾಶ್ವತ ಪರಿಹಾರಕ್ಕೆ ಅಂಬೇಡ್ಕರ್ ಸೇವಾ ಸಮಿತಿ ಆಗ್ರಹ



ರಾಯಚೂರು: ತಾಲೂಕಿನ ಕಾಡ್ಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅರಷಿಣಗಿ ಗ್ರಾಮದ ಪರಿಶಿಷ್ಟ ಜಾತಿ ಓಣಿಯಲ್ಲಿ ಕಳೆದ 30ರಿಂದ 35 ವರ್ಷಗಳಿಂದ ಬಗೆಹರಿಯದೆ ಉಳಿದಿರುವ ಮೂಲಭೂತ ಸೌಕರ್ಯಗಳ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಅಂಬೇಡ್ಕರ್ ಸೇವಾ ಸಮಿತಿ ಕರ್ನಾಟಕ ಸಂಘಟನೆಯ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ.

ಸಂಘಟನೆಯ ತಾಲೂಕು ಉಪಾಧ್ಯಕ್ಷ ಕೃಷ್ಣ ಹಾಗೂ ಹೋಬಳಿ ಅಧ್ಯಕ್ಷ ಸುರೇಶ್ ಅವರ ನೇತೃತ್ವದಲ್ಲಿ ಕಾಡ್ಲೂರು ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ (ಪಿಡಿಒ) ಮನವಿ ಸಲ್ಲಿಸಲಾಯಿತು. ಬಳಿಕ ಅಧಿಕಾರಿಯೊಂದಿಗೆ ಅರಷಿಣಗಿ ಗ್ರಾಮಕ್ಕೆ ತೆರಳಿ ಸಮಸ್ಯೆಗಳ ಕುರಿತು ಸ್ಥಳ ಪರಿಶೀಲನೆ ನಡೆಸಿ, ನಿವಾಸಿಗಳ ಅಹವಾಲುಗಳನ್ನು ಆಲಿಸಲಾಯಿತು.

ಗ್ರಾಮದ ಪರಿಶಿಷ್ಟ ಜಾತಿ ಓಣಿಯಲ್ಲಿರುವ ಸುಮಾರು 35 ಮನೆಗಳ ನಿವಾಸಿಗಳು ದಶಕಗಳಿಂದ ಸಮರ್ಪಕ ಚರಂಡಿ ಹಾಗೂ ಗೃಹಬಳಕೆಯ ನೀರಿನ ಪೈಪ್‌ಲೈನ್ ಸೌಲಭ್ಯವಿಲ್ಲದೆ ತೊಂದರೆ ಅನುಭವಿಸುತ್ತಿದ್ದಾರೆ. ಮನೆಗಳಿಂದ ಹೊರಬರುವ ಕೊಳಚೆ ನೀರು ಸರಾಗವಾಗಿ ಹರಿದುಹೋಗಲು ವ್ಯವಸ್ಥೆಯಿಲ್ಲದಿರುವುದರಿಂದ ಸ್ವಚ್ಛತೆ ಕಾಪಾಡಿಕೊಳ್ಳುವುದು ಕಷ್ಟಕರವಾಗಿದೆ ಎಂದು ಗ್ರಾಮಸ್ಥರು ಅಧಿಕಾರಿಗಳ ಗಮನಕ್ಕೆ ತಂದರು.

ಓಣಿಯಲ್ಲಿ ಸುಸಜ್ಜಿತ ಚರಂಡಿ ನಿರ್ಮಿಸುವುದರ ಜೊತೆಗೆ ಕೃಷ್ಣಾ ನದಿಯಿಂದ ಪಂಪ್‌ಮೋಟಾರ್ ಮೂಲಕ ನೀರು ಸರಬರಾಜು ಮಾಡಲು ಅಗತ್ಯ ಪೈಪ್‌ಲೈನ್ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಗ್ರಾಮದಲ್ಲಿರುವ ಆರ್‌ಒ ಶುದ್ಧ ಕುಡಿಯುವ ನೀರಿನ ಘಟಕವನ್ನು ಗ್ರಾಮ ಪಂಚಾಯಿತಿಯೇ ಸಮರ್ಪಕವಾಗಿ ನಿರ್ವಹಿಸಿ, ಸಾರ್ವಜನಿಕರಿಗೆ ಉಚಿತವಾಗಿ ಶುದ್ಧ ಕುಡಿಯುವ ನೀರು ಒದಗಿಸಬೇಕು. ಹೆಚ್ಚುತ್ತಿರುವ ಜನಸಂಖ್ಯೆಗೆ ಅನುಗುಣವಾಗಿ ಮತ್ತೊಂದು ಆರ್‌ಒ ಘಟಕ ಸ್ಥಾಪಿಸಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಮಾರಮ್ಮ ದೇವಸ್ಥಾನದಿಂದ ಕೃಷ್ಣಾ ನದಿಯವರೆಗೆ ಇರುವ ರಸ್ತೆಯನ್ನು ಪಿಡಿಒ ಹಾಗೂ ಸಂಘಟನೆಯ ಪದಾಧಿಕಾರಿಗಳು ಪರಿಶೀಲಿಸಿದರು. ರಸ್ತೆ ಹದಗೆಟ್ಟಿರುವುದರಿಂದ ಮಳೆಗಾಲದಲ್ಲಿ ಸಾರ್ವಜನಿಕರು ಹಾಗೂ ಭಕ್ತರು ಸಂಚರಿಸಲು ತೀವ್ರ ತೊಂದರೆಯಾಗುತ್ತಿದೆ ಎಂದು ಗ್ರಾಮಸ್ಥರು ತಿಳಿಸಿದರು.

ಪ್ರತಿವರ್ಷ ಮಾರಮ್ಮ ದೇವಸ್ಥಾನದಿಂದ ರಂಗಸ್ಥಳಕ್ಕೆ ತೆರಳುವ ಸಂದರ್ಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಇದೇ ರಸ್ತೆಯನ್ನು ಬಳಸುತ್ತಾರೆ. ಆದ್ದರಿಂದ ಮಾರಮ್ಮ ದೇವಸ್ಥಾನದಿಂದ ಕೃಷ್ಣಾ ನದಿಯವರೆಗೆ ಗುಣಮಟ್ಟದ ಸಿಮೆಂಟ್ ಕಾಂಕ್ರೀಟ್ (ಸಿಸಿ) ರಸ್ತೆ ನಿರ್ಮಿಸಬೇಕು. ರಸ್ತೆಯ ಎರಡೂ ಬದಿಗಳಲ್ಲಿ ಮಳೆನೀರು ಸರಾಗವಾಗಿ ಹರಿದುಹೋಗಲು ಚರಂಡಿ ವ್ಯವಸ್ಥೆಯನ್ನೂ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಗ್ರಾಮೀಣ ಜನರಿಗೆ ಕುಡಿಯುವ ನೀರು, ಚರಂಡಿ ಹಾಗೂ ರಸ್ತೆ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವುದು ಸಂಬಂಧಪಟ್ಟ ಅಧಿಕಾರಿಗಳ ಜವಾಬ್ದಾರಿಯಾಗಿದೆ. ಹಲವು ದಶಕಗಳಿಂದ ಬಗೆಹರಿಯದ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ, ಅಗತ್ಯ ಅನುದಾನ ಹಾಗೂ ಆಡಳಿತಾತ್ಮಕ ಅನುಮೋದನೆ ಪಡೆದು ಕಾಮಗಾರಿಗಳನ್ನು ಶೀಘ್ರ ಆರಂಭಿಸಬೇಕು ಎಂದು ಸಂಘಟನೆಯ ಪದಾಧಿಕಾರಿಗಳು ಒತ್ತಾಯಿಸಿದರು.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲು ಸಾಧ್ಯವಾಗದಿದ್ದರೆ ಸಂಬಂಧಪಟ್ಟ ಮೇಲಧಿಕಾರಿಗಳು ಹಾಗೂ ಇಲಾಖೆಗಳ ಗಮನಕ್ಕೆ ತಂದು ಶಾಶ್ವತ ಪರಿಹಾರ ಕಲ್ಪಿಸಬೇಕು. ಸಾರ್ವಜನಿಕರ ಮೂಲಭೂತ ಸೌಲಭ್ಯಗಳ ಬೇಡಿಕೆಗಳಿಗೆ ಆದ್ಯತೆ ನೀಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಅಂಬೇಡ್ಕರ್ ಸೇವಾ ಸಮಿತಿಯ ತಾಲೂಕು ಉಪಾಧ್ಯಕ್ಷ ಕೃಷ್ಣ, ಹೋಬಳಿ ಅಧ್ಯಕ್ಷ ಸುರೇಶ್, ಪರಿಶಿಷ್ಟ ಜಾತಿ ಓಣಿಯ ನಿವಾಸಿಗಳು ಹಾಗೂ ಸ್ಥಳೀಯ ಸಾರ್ವಜನಿಕರು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K